ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 23 RNI Number : KNKAN/25/A2770 27-01-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :23 ರಾಯಚೂರು 27-01-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ನಾನಾ ಅನುಮಾನಗಳಿಗೆ ಎಡೆ ಮಾಡಿಕೊಡುತ್ತಿದೆ 400 ಕೋಟಿ ದರೋಡೆ ಪ್ರಕರಣ

ಬೆಂಗಳೂರು, ಜ.26- ಬೆಳಗಾವಿಯ ಖಾನಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ ಎನ್ನಲಾದ 400 ಕೋಟಿ ರೂ. ಹಣ ದರೋಡೆ ಪ್ರಕರಣ ನಾನಾ ರೀತಿಯ ಅನುಮಾನಗಳಿಗೆ ಎಡೆ ಮಾಡಿಕೊಡುತ್ತಿದೆ.

ಗೋವಾದಿಂದ ಮಹಾರಾಷ್ಟ್ರಕ್ಕೆ ಎರಡು ಕಂಟೈನರ್‌ಗಳಲ್ಲಿ ಸಾಗಿಸಲಾಗುತ್ತಿದ್ದ 400 ಕೋಟಿ ರೂ. ಹಣ ನಿಜವಾಗಿಯೂ ದರೋಡೆಯಾಗಿದೆಯೇ ಅಥವಾ ಹಣ ಸಾಗಿಸುತ್ತಿದ್ದ ವ್ಯಕ್ತಿ ಮಾಲೀಕರ ದಾರಿ ತಪ್ಪಿಸಲು ದರೋಡೆ ನಾಟಕವಾಡಿರಬಹುದೇ ಎಂಬ ಅನುಮಾನ ಪೊಲೀಸರನ್ನು ಕಾಡತೊಡಗಿದೆ.

ಅದರಲ್ಲೂ ಗೋವಾ, ಮಹಾರಾಷ್ಟ್ರ ಮತ್ತು ಕರ್ನಾಟಕ ಗಡಿ ವ್ಯಾಪ್ತಿಯಲ್ಲಿರುವ ಖಾನಾಪುರ ಠಾಣಾ ವ್ಯಾಪ್ತಿಯ ಚೋರ್ಲಾ ಘಾಟ್ ಬಳಿ 400 ಕೋಟಿ ರೂ.ಗಳ ದರೋಡೆ ಪ್ರಕರಣ ಸೃಷ್ಟಿಯಾಗಿರುವುದು ಹಲವಾರು ಅಂತೆ ಕಂತೆಗಳಿಗೆ ಕಾರಣವಾಗಿದೆ.

ಒಂದು ವೇಳೆ ದರೋಡೆ ನಡೆದಿದ್ದೆ ಆದರೆ, ಅಷ್ಟೊಂದು ಹಣ ಸಾಗಿಸುತ್ತಿದ್ದು ಎಲ್ಲಿಗೆ ಎಂಬ ಅನುಮಾನ ಮೂಡತೊಡಗಿದೆ. ಮೂಲಗಳ ಪ್ರಕಾರ ಗೋವಾದಿಂದ ಎರಡು ಕಂಟೈನರ್‌ಗಳಲ್ಲಿ 400 ಕೋಟಿ ರೂ. ಹಣವನ್ನು ಮಹಾರಾಷ್ಟ್ರಕ್ಕೆ ಸಾಗಿಸಲಾಗುತ್ತಿತ್ತು ಎಂದು ಶಂಕಿಸಲಾಗಿದ್ದರೂ ಅದಿನ್ನು ಖಚಿತಪಟ್ಟಿಲ್ಲ.

ಗುಜರಾತ್‌ನಿಂದ 400 ಕೋಟಿ ಹಣವನ್ನು ತರಿಸಿಕೊಂಡು ಅದನ್ನು ಗೋವಾ ಮೂಲಕ ಮಹಾರಾಷ್ಟ್ರದಲ್ಲಿ ಇತ್ತೀಚೆಗೆ ನಡೆದ ಸ್ಥಳೀಯ ಸಂಸ್ಥೆ ಚುನಾವಣೆಯಲಿ



ಬಳಕೆ ಮಾಡಿಕೊಳ್ಳಲು ಸಾಗಿಸಲಾಗುತ್ತಿತ್ತು ಎನ್ನುವ ಮಾತುಗಳು ಕೇಳಿ ಬರುತ್ತಿದೆ.

ಮತ್ತೊಂದು ಕೋನದಲ್ಲಿ ನೋಡುವುದಾದರೆ ಮುಂಬರುವ ದಿನಗಳಲ್ಲಿ ನಡೆಯಲಿರುವ ಪಶ್ಚಿಮ ಬಂಗಾಳ, ತಮಿಳುನಾಡು, ಅಸ್ಸಾಂ, ಕೇರಳ ಮತ್ತು ಪಾಂಡಿಚೇರಿ ಚುನಾವಣೆಯಲ್ಲಿ ಬಳಕೆ ಮಾಡಲು ಸಾಗಿಸಿರುವ ಸಾಧ್ಯತೆಗಳನ್ನು ಅಲ್ಲಗಳೆಯುವಂತಿಲ್ಲ.

ಆದರೆ, ಬಲ್ಲ ಮೂಲಗಳು ದೇಶದಲ್ಲಿ ನಿಷೇಧಗೊಂಡಿರುವ ಎರಡು ಸಾವಿರ ನೋಟುಗಳನ್ನು ಬದಲಾವಣೆ ಮಾಡಲು 400 ಕೋಟಿ ರೂ. ಹಣವನ್ನು ಅಕ್ರಮವಾಗಿ ತಿರುಪತಿಗೆ ಸಾಗಿಸಿರುವ ಸಾಧ್ಯತೆಗಳಿರಬಹುದು ಎಂದು ಅಂದಾಜಿಸಿವೆ.

ತೀವ್ರಗೊಂಡ ಶೋಧ; ಕಂಟೈನರ್‌ಗಳಲ್ಲಿ ಸಾಗಿಸಲಾಗುತ್ತಿದ್ದ 400 ಕೋಟಿ ರೂ. ಹಣ ದರೋಡೆ ಪ್ರಕರಣದ ಬೆನ್ನು ಬಿದ್ದಿರುವ ಮಹಾರಾಷ್ಟ್ರ ಪೊಲೀಸರು ವಿವಿಧ ಕೋನಗಳಲ್ಲಿ ಕಾರ್ಯಚರಣೆ ನಡೆಸುತ್ತಿದ್ದಾರೆ.

ಮಹಾರಾಷ್ಟ್ರ ಪೊಲೀಸರ ಕಾರ್ಯಚರಣೆಗೆ ರಾಜ್ಯದ ಕೆಲ ಪೊಲೀಸರು ಸಾಥ್ ನೀಡುತ್ತಿದ್ದಾರೆ. ಪ್ರಕರಣವನ್ನು ವಿವಿಧ ಕೋನಗಳಲ್ಲಿ ವಿಚಾರಣೆ ನಡೆಸಲಾಗುತ್ತಿದ್ದು, ಈಗಾಗಲೇ ಮಹಾರಾಷ್ಟ್ರಪೊಲೀಸರು ಆರು ಮಂದಿಯನ್ನು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸುತ್ತಿದ್ದಾರೆ.

ಅದರಲ್ಲೂ ಪ್ರಕರಣದ ಕಿಂಗ್‌ಪಿನ್ ಎನ್ನಲಾದ ಕಿಶೋರ್ ಸೇಠ್ ಎಂಬಾತನನ್ನು ತೀವ್ರ ವಿಚಾರಣೆಗೊಳಪಡಿಸಲಾಗಿದೆ. ಆತ ನೀಡಿರುವ ಕೆಲ ಮಾಹಿತಿ ಪ್ರಕಾರ ವಿಚಾರಣೆ ನಡೆಸಲಾಗುತ್ತಿದೆ.

ದರೋಡೆ ನಡೆದ ಪ್ರದೇಶ ಮೂರು ರಾಜ್ಯಗಳ ಗಡಿಯಲ್ಲಿ ಬರುವುದರಿಂದ ಅಲ್ಲಿ ಯಾವುದೇ ಮೊಬೈಲ್ ನೆಟ್‌ವರ್ಕ್ ಸಿಗದೆ ಇರುವುದನ್ನು ನೋಡಿಕೊಂಡೇ ದರೋಡೆ ನಡೆಸಿರುವುದರ ಹಿಂದೆ ರಾಜಕೀಯ ಷಡ್ಯಂತ್ರವೂ ಇರುವ ಸಾಧ್ಯತೆಗಳಿವೆ ಎಂದು ಪೊಲೀಸ್ ಉನ್ನತ ಮೂಲಗಳು ಈ ಸಂಜೆಗೆ ಖಚಿತಪಡಿಸಿವೆ.

ಒಟ್ಟಾರೆ, 400 ಕೋಟಿ ರೂ.ಗಳ ದರೋಡೆ ನಡೆದಿದೆಯೇ ಅಥವಾ ದರೋಡೆ ನಾಟಕದ ಮೂಲಕ 400 ಕೋಟಿ ಗುಳುಂ ಮಾಡುವ ಹುನ್ನಾರವಿದೆಯೋ ಅಥವಾ ಇಡೀ ದೇಶವನ್ನೇ ಬೆಚ್ಚಿ ಬೀಳಿಸಿರುವ ಈ ದರೋಡೆ ಪ್ರಕರಣದ ಹಿಂದೆ ದೇಶದ ಘಟಾನುಘಟಿ ರಾಜಕಾರಣಿಗಳ ಕೈವಾಡವಿದೆಯೋ ಇಲ್ಲವೋ ಎನ್ನುವುದು ಪೊಲೀಸರ ತನಿಖೆ ನಂತರವಷ್ಟೇ ಬಹಿರಂಗಗೊಳ್ಳಬೇಕಿದೆ.

77ನೇ ಗಣರಾಜ್ಯೋತ್ಸವ: ಉಸ್ತುವಾರಿ ಸಚಿವ ಶರಣಪ್ರಕಾಶ ಧ್ವಜಾರೋಹಣ

ರಾಯಚೂರು,ಜ.26-

77ನೇ ಗಣರಾಜ್ಯೋತ್ಸವದ ಅಂಗವಾಗಿ ರಾಯಚೂರಿನ ಜಿಲ್ಲಾ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ ಪಾಟೀಲ ಧ್ವಜಾರೋಹಣ ನಡೆಸಿದರು.

ಈ ಸಂದರ್ಭದಲ್ಲಿ ಎಂಎಲ್ ಸಿ ವಸಂತಕುಮಾರ, ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರೂ ಆಗಿರುವ ಶಾಸಕ ಬಸನಗೌಡ ದದ್ದಲ್, ನಗರ ಶಾಸಕ ಡಾ. ಶಿವರಾಜ ಪಾಟೀಲ, ಜಿಲ್ಲಾಧಿಕಾರಿ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷುಗಿರಿ, ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ, ಜಿಲ್ಲಾ ಪಂಚಾಯತ್ ಸಿಇಒ ಈಶ್ವರ್ ಕುಮಾರ್ ಕಾಂದೂ, ಗ್ಯಾರಂಟಿ ಸಮಿತಿಯ ತಾಲೂಕು



ಅಧ್ಯಕ್ಷ ಪವನ್ ಕುಮಾರ್ ಪಾಟೀಲ ಕಿಶೋರ್, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ಮತ್ತು ಡಾ. ರಝಾಕ್ ಉಸ್ತಾದ್ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

ವಿವಿಧ ಶಾಲಾ ಮತ್ತು ಕಾಲೇಜುಗಳ ವಿದ್ಯಾರ್ಥಿಗಳ ಆಕರ್ಷಕ ಪಥಸಂಚಲನವನ್ನು ವೀಕ್ಷಿಸಿದ ಬಳಿಕ ಸಚಿವರು ಗಣರಾಜ್ಯೋತ್ಸವ ಸಂದೇಶ ನೀಡಿದರು.

ಸತ್ಯ ಮತ್ತು ಅಹಿಂಸೆಯಿಂದ ಪಡೆದ ಸ್ವಾತಂತ್ರ್ಯವು ವಿಶ್ವಕ್ಕೆ ಮಾದರಿಯಾಗಿದೆ. ಸರ್ವರಿಗೂ ಸಮಾನತೆ ದೊರಕಬೇಕು ಎಂಬುದೇ ಸ್ವಾತಂತ್ರ್ಯ ಹೋರಾಟಗಾರರ ಮುಖ್ಯ ಗುರಿಯಾಗಿತ್ತು. ಬಾಬಾಸಾಹೇಬ್ ಅಂಬೇಡ್ಕರ್ ಜ್ಞಾನದ ಸಾಗರ, ಮೇಧಾವಿ, ದೇಶಕ್ಕೆ ಅಗತ್ಯವಾದ ಅದ್ಭುತ ಸಂವಿಧಾನ ಮತ್ತು ವಿಶ್ವಕ್ಕೆ ಮಾದರಿ ಸಂವಿಧಾನವನ್ನು ನಮಗೆ ನೀಡಿದ್ದಾರೆ ಎಂದರು.

ಕಾಶ್ಮೀರದಿಂದ ಕನ್ಯಾಕುಮಾರಿ ವರೆಗೆ ವಿವಿಧ ಭಾಷೆ, ಸಂಸ್ಕೃತಿ, ಅಭಿಪ್ರಾಯಗಳ ನಡುವಿನ ಏಕತೆಯ ಗಮನದಲ್ಲಿಟ್ಟುಕೊಂಡು ಎಲ್ಲರಿಗೂ ಅನ್ವಯವಾಗುವಂತೆ ಸಂವಿಧಾನವನ್ನು ರೂಪಿಸಲಾಗಿದೆ. ಸಂವಿಧಾನ ರಚನಾ ಸಭೆಯಲ್ಲಿ ಭಾಗವಹಿಸಿದ್ದ ಅನೇಕ ಸ್ವಾತಂತ್ರ್ಯ ಹೋರಾಟಗಾರರು ಪ್ರತಿ ಶಬ್ದದ ಕುರಿತು ಚರ್ಚೆ ಮಾಡಿ, ತೀವ್ರ ಪರಿಶೀಲನೆ ನಡೆಸಿ ಒಪ್ಪಿಗೆ ನೀಡಿದ್ದರು. ಪ್ರತಿಯೊಬ್ಬರೂ ಸಂವಿಧಾನದ ಅಂಗೀಕಾರಕ್ಕಾಗಿ ತೀವ್ರವಾಗಿ ಚರ್ಚೆ ಮಾಡಿದ್ದಾರೆ. ಆದ್ದರಿಂದ ನಾವೆಲ್ಲರೂ ಈ ಸಂವಿಧಾನವನ್ನು ಅಂಗೀಕರಿಸಬೇಕು ಎಂದು ಸಚಿವರು ಅಭಿಪ್ರಾಯಪಟ್ಟರು.

ಸಂವಿಧಾನದ ಅಡಿಯಲ್ಲಿ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಿದ್ದೇವೆ. ಸರ್ಕಾರವು ಸರಿಯಾದ ದಿಕ್ಕಿನಲ್ಲಿ ಸಾಗುತ್ತಿದೆ.

ವಡವಟ್ಟಿಯಲ್ಲಿ 77ನೇ ಗಣರಾಜ್ಯೋತ್ಸವ ಆಚರಣೆ



ರಾಯಚೂರು,ಜ.26-

77ನೇ ಗಣರಾಜ್ಯೋತ್ಸವದ ಅಂಗವಾಗಿ ಸಿರವಾರ ತಾಲೂಕಿನ ವಡವಟ್ಟಿ ಗ್ರಾಮದಲ್ಲಿ ಧ್ವಜಾರೋಹಣ ನಡೆಸಿದರು.ಎಸ್‌ಡಿಎಂಸಿ ಅಧ್ಯಕ್ಷರು ಧ್ವಜಾರೋಹಣ ಮಾಡಿದರು.

ಈ ಸಂದರ್ಭದಲ್ಲಿ ವೆಂಕಟೇಶ ಸಾಗರ ಅವರು ಮಾತನಾಡಿ ಸತ್ಯ ಮತ್ತು ಅಹಿಂಸೆಯಿಂದ ಪಡೆದ ಸ್ವಾತಂತ್ರ್ಯವು ವಿಶ್ವಕ್ಕೆ ಮಾದರಿಯಾಗಿತ್ತು. ಬಾಬಾಸಾಹೇಬ್ ಅಂಬೇಡ್ಕರ್ ಜ್ಞಾನದ ಸಾಗರ, ಮೇಧಾವಿ, ದೇಶಕ್ಕೆ ಅಗತ್ಯವಾದ ಅದ್ಭುತ ಸಂವಿಧಾನ ಮತ್ತು ವಿಶ್ವಕ್ಕೆ ಮಾದರಿ ಸಂವಿಧಾನವನ್ನು ನಮಗೆ ನೀಡಿದ್ದಾರೆ ಎಂದರು.

ಸಂವಿಧಾನಕ್ಕಿಂತ ದೊಡ್ಡವರು ಯಾರೂ ಇಲ್ಲ; ದೇಶ ಕಟ್ಟಲು ಕೇಂದ್ರ-ರಾಜ್ಯ ಸರ್ಕಾರಗಳು ನಿಸ್ವಾರ್ಥವಾಗಿ ಕಾರ್ಯನಿರ್ವಹಿಸಬೇಕು. ಪ್ರಜೆಗಳಾದ ನಾವೆಲ್ಲಾ ದೇಶಭಕ್ತಿ ಅಳವಡಿಸಿಕೊಳ್ಳಬೇಕು. ಎಲ್ಲರನ್ನೂ ಸಮಾನವಾಗಿ ಕಾಣಬೇಕು, ಗೌರವಿಸಬೇಕು .ಅನೇಕ ಮಹಾನೀಯರು ತ್ಯಾಗ ಬಲಿದಾನದಿಂದ ಈ ಸ್ವಾತಂತ್ರ್ಯ ಸಿಕ್ಕಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ

ಮೂರನೇಯ ಪುಟಕ್ಕೆ

ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಧ್ವಜಾರೋಹಣ



ರಾಯಚೂರು,ಜ.26-

ಇಂದು 77ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ವೀರನಗೌಡ ಪಾಟೀಲ್ ಲೆಕ್ಕಿಹಾಳ್ ಅವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ನಗರ ಶಾಸಕರಾದ ಶ್ರೀ ಡಾ.ಶಿವರಾಜ್ ಪಾಟೀಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರವೀಂದ್ರ ಜಾಲ್ದಾರ ಸಂತೋಷ ರಾಜಗೂರು, ಜಂಬಣ್ಣ ನೀಲಗಲ್, ಜಿಲ್ಲಾ ಉಪಾಧ್ಯಕ್ಷ ಶಂಕರ್ ರೆಡ್ಡಿ, ನಗರ ಅಧ್ಯಕ್ಷ ರಾಘವೇಂದ್ರ ಊಟಕೂರು, ಶಿವಬಸಪ್ಪ ಮಾಲಿ ಪಾಟೀಲ್, ಕಡಗೋಲ್ ಆಂಜನೇಯ, ರಾಜಕುಮಾರ, ರಾಮಚಂದ್ರ ಕಡಗೋಲ್, ಬಂಗಿ ನರಸಾರೆಡ್ಡಿ. ಟಿ. ಶ್ರೀನಿವಾಸ್ ರೆಡ್ಡಿ. ಬಿ. ಗೋವಿಂದ್. ಮುಕ್ತಿಯರ್ ಬಂದೇಶ್ಜೆ. ಎಂ. ಮೌನೇಶ್ ನಾಗರಾಜ್ ಬಾಲ್ಕಿ ಕೊಟ್ರೇಷಪ್ಪ ಕೋರಿ, ವಿನಾಯಕ ರಾವ್, ವಿರೇಶ್ ತಳವಾರ್ ಗುಡ್ಸಿ ನರಸಾರೆಡ್ಡಿ, ವಿ. ಪಿ. ರೆಡ್ಡಿ ವಿಜಯ ರಾಜೇಶ್ವರಿ, ವಾಣಿಶ್ರೀ ಸುಮಾ ಗಸ್ತಿ, ಸೀತಾ ನಾಯಕ್, ನಾಗವೇಣಿ, ಸಂಗೀತಾ, ಅಶ್ವಿನಿ, ಸುನೀತಾ ಪಟೇಲ್, ನಿವೇದಿತಾ ಮತ್ತು ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

ಜಿಲ್ಲೆಯಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ ಫಲಿತಾಂಶ ಸುಧಾರಣೆಗೆ ಒತ್ತು

ರಾಯಚೂರು,ಜ.26-

ರಾಯಚೂರು ಜಿಲ್ಲೆಯಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಫಲಿತಾಂಶ ಸುಧಾರಿಸುವ ಪ್ರಯತ್ನದ ಭಾಗವಾಗಿ ಕಾರ್ಯಕ್ರಮ ರೂಪಿಸಲು ಎನ್ ಜಿಓ ಜೊತೆಗೆ ಚರ್ಚಿಸಿ ಕಾರ್ಯಯೋಜನೆ ರೂಪಿಸುವ ಚಿಂತನೆಯಿದೆ ಎಂದು ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು.

ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26ರಂದು ಜಿಲ್ಲಾಡಳಿತದಿಂದ ನಡೆದ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಬಳಿಕ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಕೇರಳ ಮತ್ತು ಕರ್ನಾಟಕ ಹೊರತುಪಡಿಸಿ ದೇಶದ ಎಲ್ಲ ರಾಜ್ಯಗಳಿಗೂ ಎಮ್ಸ್ ನೀಡಲಾಗಿದೆ. ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕೇಂದ್ರಕ್ಕೆ ಪತ್ರ ಬರೆದು ಕರ್ನಾಟಕದ ರಾಯಚೂರಲ್ಲಿ ಏಮ್ಸ್ ಸ್ಥಾಪನೆಗೆ ಒತ್ತಡ ಹಾಕುತ್ತಿದ್ದಾರೆ ಎಂದು ಸಚಿವರು ತಿಳಿಸಿದರು.

ರಾಯಚೂರು ಜಿಲ್ಲೆಯಲ್ಲಿ ಮಕ್ಕಳು ಅಪೌಷ್ಟಿಕತೆಯಿಂದ



ಬಳಲುತ್ತಿದ್ದಾರೆ ಎಂಬ ವರದಿಗಳಿವೆ. ಇದನ್ನು ಹೋಗಲಾಡಿಸಲು ಆರೋಗ್ಯ ಇಲಾಖೆಯಿಂದ ಈಗಾಗಲೇ ಅಗತ್ಯ ಕ್ರಮವಹಿಸಲಾಗಿದೆ. ಈ ದಿಶೆಯಲ್ಲಿ ಜಿಲ್ಲೆಯ ಜನರ ಒತ್ತಾಸೆಯಂತೆ ಜಿಲ್ಲೆಯಲ್ಲಿ

ಮಕ್ಕಳ ಆಸ್ಪತ್ರೆಯ ಸ್ಥಾಪನೆಯ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ಸಚಿವರು ತಿಳಿಸಿದರು.

ರಸ್ತೆ, ಬೀದಿ ದೀಪ ಸೇರಿದಂತೆ ಮೂಲಭೂತ ಸೌಕರ್ಯ ಕಲ್ಪಿಸಲು ರಾಯಚೂರು ಜಿಲ್ಲೆಗೆ 200 ಕೋಟಿ ರೂ ಬಿಡುಗಡೆಯಾಗಿದೆ. ರಸ್ತೆ ದುರಸ್ತಿ ಸೇರಿದಂತೆ ಮೂಲಭೂತ ಸೌಕರ್ಯ ಕಲ್ಪಿಸುವ ಕಾರ್ಯಗಳು ನಿರಂತರ ನಡೆಯಲಿವೆ ಎಂದು ಸಚಿವರು ತಿಳಿಸಿದರು.

ಪತ್ರಕರ್ತರ ಅಪೇಕ್ಷೆಯಂತೆ ಸಹ ಫೆ.5ರಿಂದ ಮೂರು ದಿನಗಳ ಕಾಲ ರಾಯಚೂರು ಜಿಲ್ಲಾ ಉತ್ಸವ ನಿಗದಿ ಮಾಡಲಾಗಿದೆ. ಇದಕ್ಕೆ ವ್ಯಾಪಕ ಪ್ರಚಾರ ನೀಡಬೇಕು ಎಂದು ಸಚಿವರು ಮಾಧ್ಯಮ ಪ್ರತಿನಿಧಿಗಳಲ್ಲಿ ಮನವಿ ಮಾಡಿದರು.

ರಾಯಚೂರು ಉತ್ಸವಕ್ಕು ಮೊದಲು ರಾಯಚೂರು ನಗರದಲ್ಲಿನ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚಿ ಸರಿಪಡಿಸಬೇಕು ಎಂದು ಮಹಾನಗರ ಪಾಲಿಕೆಗೆ ಸೂಚನೆ ನೀಡಿದ್ದಾಗಿ ಸಚಿವರು ಹೇಳಿದರು.

ರಾಯಚೂರು ಜಿಲ್ಲೆಯಲ್ಲಿ ಅನುವಿದ್ಯುತ್ ಸ್ಥಾವರ ಘಟಕದ ಸ್ಥಾಪನೆಗೆ ಅವಕಾಶ ಮಾಡಿಕೊಡುವುದಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.



ಲಿಂಗಸೂಗೂರು: ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಗೌಡೂರು 77ನೇ ಗಣರಾಜ್ಯೋತ್ಸವ ಅಂಗವಾಗಿ ಧ್ವಜಾರೋಹಣ. ಮುಖ್ಯ ಗುರುಗಳಾದ ಶ್ರೀಮತಿ ವಿದ್ಯಾವತಿ ಅವರು ಧ್ವಜಾರೋಹಣವನ್ನು ಮಾಡಿದರು ಆನಂತರ ಮಕ್ಕಳ ಡ್ಯಾನ್ಸ್ ಬಣ್ಣದಲ್ಲಿ ಮಿಂಚುತ್ತಿದ್ದರು. ಈ ಸಂದರ್ಭದಲ್ಲಿ. ಹೆಚ್ ಡಿ ಎಂ ಸಿ ಮಾಜಿ ಅಧ್ಯಕ್ಷರಾದ. ರಾಜ ಲಕ್ಷ್ಮಣ್ ನಾಯಕ್. ರೈತ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ. ಬಸವರಾಜ್ ಅಂಗಡಿ. ಅಂಬರೀಶ್. ಶಿಕ್ಷಕಗಳಾದ. ಫರೀದ್ ಸರ್ ಕವಿತಾ ಮೇಡಂ ಅಮೀನಾ ಬೇಗಮ್. ಶಿಲ್ಪ. ಕವಿತಾ. ಶಿವಣ್ಣ. ಚೇತನ್. ವಿಜಯಲಕ್ಷ್ಮಿ. ಎಲ್ಲಾ ಶಿಕ್ಷಕರು ಭಾಗಿಯಾಗಿದ್ದರು.

ಕುರ್ಡಿ:77ನೇ ಗಣರಾಜ್ಯೋತ್ಸವ ಆಚರಣೆ

ರಾಯಚೂರು,ಜ.26-

ಕುರ್ಡಿ ಗ್ರಾಮದಲ್ಲಿ 77ನೇ ಗಣರಾಜ್ಯೋತ್ಸವವನ್ನು ಸೋಮವಾರ ಅತ್ಯಂತ ಸಂಭ್ರಮ ಹಾಗೂ ರಾಷ್ಟ್ರಭಕ್ತಿಯ ವಾತಾವರಣದಲ್ಲಿ ಆಚರಿಸಲಾಯಿತು. ಗ್ರಾಮದ ಹಿರಿಯರು, ಜನಪ್ರತಿನಿಧಿಗಳು, ವಿವಿಧ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರ ಸಕ್ರಿಯ ಭಾಗವಹಿಸುವಿಕೆಯಿಂದ ಕಾರ್ಯಕ್ರಮವು ವಿಶೇಷ ಮಹತ್ವ ಪಡೆದುಕೊಂಡಿತು.

ಗ್ರಾಮದ ಸಾರ್ವಜನಿಕ ಧ್ವಜಾರೋಹಣವನ್ನು ಗ್ರಾಮದ ಹಿರಿಯರಾದ ಗಡ್ಡೆಪ್ಪ ಹೂಗಾರ ಅವರು ನೆರವೇರಿಸಿದರು. ಗ್ರಾಮ ಪಂಚಾಯತ್ ಕಚೇರಿಯಲ್ಲಿ ನಡೆದ ಧ್ವಜಾರೋಹಣವನ್ನು ರಮೇಶ್ ಬುಡ್ಡಪ್ಪ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಧ್ವಜಾರೋಹಣವನ್ನು ಮನೋಜ್ ಗೌಡ ಚಿಕ್ಕ ಗೌಡ್ರು, ಹಾಗೂ ಸಾರ್ವಜನಿಕ ಗ್ರಂಥಾಲಯ ದಲ್ಲಿ ನಡೆದ ಧ್ವಜಾರೋಹಣವನ್ನು



ಗ್ರಾಮದ ಯುವ ಮುಖಂಡರಾದ ಗಂಗಾಧರ ಸಾಹುಕಾರ ಅವರು ನೆರವೇರಿಸಿದರು.

ಇದಲ್ಲದೆ ಗ್ರಾಮದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಎಸ್‌ಡಿಎಂಸಿ ಅಧ್ಯಕ್ಷರುಗಳು ಧ್ವಜಾರೋಹಣ ನೆರವೇರಿಸಿದ್ದು, ವಿದ್ಯಾರ್ಥಿಗಳಿಂದ ರಾಷ್ಟ್ರಗೀತೆ, ಭಾಷಣ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು. ಈ ಕಾರ್ಯಕ್ರಮಗಳು ಮಕ್ಕಳಲ್ಲಿ ದೇಶಭಕ್ತಿ ಹಾಗೂ ಸಂವಿಧಾನದ ಮೌಲ್ಯಗಳ ಅರಿವನ್ನು ಮೂಡಿಸಿತು.

ಕಾರ್ಯಕ್ರಮದಲ್ಲಿ ಕುರ್ಡಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ರಮೇಶ್ ಬುಡ್ಡಪ್ಪ, ಉಪಾಧ್ಯಕ್ಷರಾದ ಕರೆಮ್ಮ ಗಣಪತಿ ಛಲವಾದಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಮನೋಜ್ ಗೌಡ, ಉಪಾಧ್ಯಕ್ಷರಾದ ಯಲ್ಲಪ್ಪ ಯಾದವಗಟ್ಟು, ಗ್ರಾಮ ಪಂಚಾಯತ್ ಸದಸ್ಯರಾದ ಚಂದ್ರಯ್ಯ ಶೆಟ್ಟಿ, ಎಂ.ಡಿ.

ಬಳ್ಳಾರಿ: ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ

ಪ್ರತಿಯೊಂದು ಮತಕ್ಕೂ ಹೆಚ್ಚಿನ ಪ್ರಾಶಸ್ತ್ಯವಿದೆ-ಡಿಸಿ ನಾಗೇಂದ್ರ ಪ್ರಸಾದ್

ಬಳ್ಳಾರಿ,ಜ.26-

ಚುನಾವಣೆ ಒಂದು ಸೂಕ್ಷ್ಮ ಪ್ರಕ್ರಿಯೆ. ಇಲ್ಲಿ ಮತದಾನ ಅತ್ಯಮೂಲ್ಯವಾಗಿದ್ದು, ಅದರಲ್ಲಿ ಒಂದೊಂದು ಮತಕ್ಕೂ ಹೆಚ್ಚಿನ ಪ್ರಾಶಸ್ತ್ಯವಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಭಾರತದ ಚುನಾವಣಾ ಆಯೋಗ, ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ನನ್ನ ಭಾರತ, ನನ್ನ ಮತ ಎನ್ನುವ ಘೋಷವಾಕ್ಯದಡಿ ನಗರದ ಜಿಲ್ಲಾ ಪಂಚಾಯತ್ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಭಾನುವಾರ ಏರ್ಪಡಿಸಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ವರ್ಷ ಜ.01 ರಂದು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ, ತಿದ್ದುಪಡಿ, ಹೆಸರು ತೆಗೆದುಹಾಕುವಿಕೆ ಕುರಿತ ವಿವಿಧ ಅರ್ಜಿ ನಮೂನೆ ಒಳಗೊಂಡು ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ನಡೆಯಲಿದ್ದು, 18 ವರ್ಷ ತುಂಬಿದ ಯುವಕ-ಯುವತಿಯರು ತಪ್ಪದೇ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು ಹಾಗೂ ಈ ಪ್ರಕ್ರಿಯೆ ಕುರಿತು ತಮ್ಮ ಮನೆ ಹಾಗೂ ಸುತ್ತಮುತ್ತಲಿನವರಿಗೂ ಮಾಹಿತಿ ನೀಡಬೇಕು. ಶೇಕಡವಾರು ಮತದಾನದ ಪ್ರಮಾಣ ಹೆಚ್ಚಿಸಲು ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಅವರು ಹೇಳಿದರು.

ಗ್ರಾಮೀಣ ಜನರಿಗಿಂತ ನಗರ ಪ್ರದೇಶದವರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ ಮತ್ತು ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸದೇ ಇರುವುದು ವಿಷಾದನೀಯ ಸಂಗತಿಯಾಗಿದೆ. ಪ್ರಸ್ತುತದಲ್ಲಿ ಚುನಾವಣೆಗಳು ಜಾತಿ, ಸಮುದಾಯಗಳ ಆಧಾರದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು ಕಂಡುಬರುತ್ತಿದ್ದು, ಇದರಿಂದ ಕೆಲಸ ಮಾಡುವ ಯೋಗ್ಯರಿಗೆ ಅನ್ಯಾಯವಾಗಲಿದೆ. ಹಾಗಾಗಿ ಮತದಾರರು ವಿವೇಚನೆಯಿಂದ ಅರ್ಹರನ್ನು ಆಯ್ಕೆ ಮಾಡಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ದೇಶದ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಉತ್ತೇಜಿಸುವ ದೃಷ್ಟಿಯಿಂದ 1950 ರಲ್ಲಿ ಸ್ಥಾಪನೆಯಾದ ಭಾರತದ ಚುನಾವಣಾ ಆಯೋಗದ ಸಂಸ್ಥಾಪನ ದಿನದ ಸವಿನೆನಪಿಗಾಗಿ 2011 ರಲ್ಲಿ ಮೊದಲ ಬಾರಿಗೆ ಜ.25 ರಂದು ರಾಷ್ಟ್ರೀಯ ಮತದಾರರದಿನವನ್ನು ಆಚರಿಸಲಾಯಿತು ಎಂದು ತಿಳಿಸಿದರು.



ಮತದಾನ ಎಂದರೆ ಹಬ್ಬವಿದ್ದಂತೆ. ಎಲ್ಲರೂ ತಪ್ಪದೇ ಭಾಗವಹಿಸಬೇಕು. ಅದರಲ್ಲಿ ಯುವಪೀಳಿಗೆಯ ಪಾತ್ರ ಮುಖ್ಯವಾಗಿದೆ. ಪ್ರಜಾಪ್ರಭುತ್ವದಲ್ಲಿ ಸ್ವತಂತ್ರದಿಂದ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಸಂವಿಧಾನವು ಮತದಾನ ಹಕ್ಕು ನೀಡಿದೆ. ಮತ ಚಲಾಯಿಸದಿದ್ದರೆ ಆ ಅಮೂಲ್ಯವಾದ ಹಕ್ಕನ್ನು ಕಳೆದುಕೊಂಡಂತೆ. ಹಾಗಾಗಿ ಇದರಿಂದ ಯಾರೂ ಹೊರಗುಳಿಯಬಾರದು ಎಂದು ನ್ಯಾಯಾಧೀಶರು ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್ ಅವರು ಮಾತನಾಡಿ, ಮತದಾನ ಹಕ್ಕು ಒಂದು ಕರ್ತವ್ಯ. ತಪ್ಪದೇ ತಮ್ಮ ಕರ್ತವ್ಯವನ್ನು ನಿರ್ಭೀತರಾಗಿ ನಿರ್ವಹಿಸಬೇಕು. ನನ್ನ ಒಂದು ಮತದಿಂದ ಏನಾಗಲಿದೆ; ಎಂದು ಉದಾಸೀನತೆ ತೋರದೇ, ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಸರ್ವರೂ ಪಾಲ್ಗೊಳ್ಳಬೇಕು. ಇದರಿಂದ ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಮುನ್ನಡೆಯಾಗಲಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ಜಿಪಂ ಸಿಇಒ ಅವರು, ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಮತದಾರರ ಪ್ರತಿಜ್ಞಾ ವಿಧಿ ಭೋದಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, 18 ವರ್ಷ ತುಂಬಿದ ಯುವ ಪೀಳಿಗೆಯನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸುವುದು. ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸುವುದು. ಉತ್ತಮ ನಾಯಕರನ್ನು ಆರಿಸುವುದು. ದೇಶವನ್ನು ಭದ್ರ-ಬುನಾದಿಯಾಗಿಸಲು ಅವರ ಭಾಗವಹಿಸುವಿಕೆ ಕುರಿತು ತಿಳಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 18 ವರ್ಷ ತುಂಬಿ ಹೊಸದಾಗಿ ನೋಂದಾಯಿಸಿಕೊಂಡ ಯುವ ಮತದಾರರಿಗೆ ಸಾಂಕೇತಿಕವಾಗಿ ಮತದಾರರ ಗುರುತಿನ ಚೀಟಿ ವಿತರಿಸಲಾಯಿತು. ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರದ ಬೂತ್ ಮಟ್ಟದ ಅಧಿಕಾರಿಗಳಿಗೆ ಪ್ರಶಂಸನಾ ಪತ್ರ ವಿತರಿಸಿ ಅಭಿನಂದಿಸಲಾಯಿತು. ಬಳಿ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕುರಿತು ಶಾಲಾ-ಕಾಲೇಜುಗಳಲ್ಲಿ ಏರ್ಪಡಿಸಿದ್ದ ಪ್ರಬಂಧ ಹಾಗೂ ವಿವಿಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಈ ವೇಳೆ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ, ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ, ತಾಪಂ ಇಒ ಶ್ರೀಧರ ಐ ಬಾರಿಕರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿ ಕಚೇರಿಯ ಅಧಿಕಾರಿ ಮತ್ತು ಸಿಬ್ಬಂದಿ ವರ್ಗ, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.



ಶಿವನ ದಿವ್ಯದೃಷ್ಟಿಯಲ್ಲಿ ಜನ್ಮ ತಾಳಿದವರು ಸವಿತಾ ಮಹರ್ಷಿ- ಕರ್ಣಕುಮಾರ ಕೆ.

ಕೊಪ್ಪಳ,ಜ.26-

ಶಿವನ ದಿವ್ಯದೃಷ್ಟಿಯಲ್ಲಿ ಜನ್ಮ ತಾಳಿದವರು ಸವಿತಾ ಮಹರ್ಷಿಗಳು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಕೆ. ಹೇಳಿದರು ಅವರು ಭಾನುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುರಾಣ ಗ್ರಂಥಗಳ ಪ್ರಕಾರ ಸವಿತಾ ಮಹರ್ಷಿ ದೇವ ದೇವತೆಗಳ ಆಯುಷ್ಕರ್ಮ ಸೇವೆಯನ್ನು ಮಾಡುತ್ತಿದ್ದಾರೆಂದು ಕಾಶಿ ಕ್ಷೇತ್ರದಲ್ಲಿ ದೊರೆತ ಮಹಾಗ್ರಂಥದಲ್ಲಿ ಉಲ್ಲೇಖಿಸಲಾಗಿದೆ. ಶಿವನ ದಿವ್ಯ ದೃಷ್ಟಿಯಲ್ಲಿ ಜನ್ಮ ತಾಳಿದ ಸವಿತಾ ಮಹರ್ಷಿ ಬ್ರಹ್ಮಜ್ಞಾನ ಹೊಂದಿರುವುದರಿಂದಲೇ ಚತುರ್ವೇದಗಳಲ್ಲಿ ಒಂದಾದ ಸಾಮವೇದವನ್ನು ಬರೆದ್ದಾರೆ. ಸವಿತಾ ಮಹರ್ಷಿಯ ಪುತ್ರಿಯಾಗಿರುವ ಗಾಯತ್ರಿದೇವಿಯ ಮಂತ್ರಗಳಲ್ಲಿ ಸವಿತೃ ಎಂಬ ಪದವು ಸ್ಪಷ್ಟವಾಗಿ ಕಾಣುತ್ತಿವೆ ಎಂದರು.

ಪ್ರತಿಯೊಂದು ಸಮುದಾಯವನ್ನು ಗೌರವಿಸಿ ಆದರ್ಶ ವ್ಯಕ್ತಿಗಳ ತತ್ವಗಳನ್ನು ಮುಂದಿನ ಪೀಳಿಗೆಗೆ ಗೊತ್ತುಪಡಿಸುವ ನಿಟ್ಟಿನಲ್ಲಿ ರಾಜ್ಯ ಸರಕಾರವು ಜಯಂತಿಗಳನ್ನು ಆಚರಿಸುವ ಸತ್ಕಾರ್ಯಗಳನ್ನು ನಡೆಸಿದೆ. ಮಹಾನ್ ವ್ಯಕ್ತಿಗಳ ತತ್ವ-ಸಂದೇಶಗಳು ಸರ್ವಕಾಲಿಕವಾಗಿದ್ದು, ಅದರ ಹಲವು ಭಾಗವನ್ನಾದರೂ ಜನರು ಜೀವನದಲ್ಲಿ ಅಳವಡಿಸಿಕೊಂಡಾಗ, ಉತ್ತಮ ಸಮಾಜ ನಿರ್ಮಾಣದೊಂದಿಗೆ ಸದೃಢ ಭಾರತ ಹೊರಹೊಮ್ಮಲು ಸಾಧ್ಯವಿದೆ. ಪ್ರತಿಯೊಂದು ಸಮಾಜವು ಶಿಕ್ಷಣಕ್ಕೆ ಒತ್ತು ನೀಡಬೇಕು. ಶಿಕ್ಷಣದಿಂದ ಸ್ವಾವಲಂಬಿ ಬದುಕಿನೊಂದಿಗೆ ಆರ್ಥಿಕವಾಗಿ ಸದೃಢವಾಗಲು ಸಾಧ್ಯವಿದೆ.

ಶ್ರೀ ಸವಿತಾ ಮಹರ್ಷಿ ಜಯಂತಿ ಆಚರಣೆ:

ಮಹಾಪುರುಷರ ಆದರ್ಶಗಳಿಂದಲೇ ಸಮಾಜದ ಏಳಿಗೆ


ಕಲಬುರಗಿ, ಜ 26-

ಋಷಿ-ಮಹರ್ಷಿಗಳು ಯಾವ ಧರ್ಮದಲ್ಲಿ ಜನಿಸಿದರು ಅವರು ಸಮಾಜ ಸುಧಾರಕರಾಗಿ ಗುರುತಿಸಿಕೊಂಡಿದ್ದಾರೆ. ಬುದ್ಧ, ಬಸವಣ್ಣ, ವಾಲ್ಮೀಕಿ ಮೊದಲಾದ ಯುಗಪುರುಷರು ಸಮಾಜಕ್ಕೆ ಹೊಸ ದಾರಿ ತೋರಿಸಿದ್ದಾರೆ. ಯಾವುದೇ ಜಾತಿ ಅಥವಾ ಧರ್ಮದಲ್ಲಿ ಹುಟ್ಟಿದರೂ, ಮಹಾಋಷಿಗಳು ಮಾನವೀಯ ಮೌಲ್ಯಗಳನ್ನು ಪಾಲಿಸಬೇಕೆಂದು ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರ ಸಂಯುಕ್ತ ಆಶ್ರಯದಲ್ಲಿ ಇಲ್ಲಿನ ರಂಗಮಂದಿರದಲ್ಲಿ ಭಾನುವಾರ ಆಯೋಜಿಸಲಾದ ಶ್ರೀ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಸವಿತಾ ಮಹರ್ಷಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ನಗರದ ಶರಣಸಿರಸಗಿಯಲ್ಲಿ ಸಿಎ ಸೈಟ್‌ಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಕಣ್ಣಿ ಮಾರ್ಕೆಟ್‌ನಲ್ಲಿ ಸಲೂನ್ ತೆರೆಯಲು ಸಹ ಅರ್ಜಿ ಹಾಕುವಂತೆ ಸಲಹೆ ನೀಡಿದರು. ಸವಿತಾ ಸಮಾಜದ ಮೇಲೆ ಹೆಚ್ಚಿನ ಕಾಳಜಿ ಇದ್ದು, ಎಲ್ಲ ಬೇಡಿಕೆಗಳನ್ನು ಹಂತಹಂತವಾಗಿ ಈಡೇರಿಸಲಾಗುವುದು ಎಂದು ಶಾಸಕರು ಭರವಸೆ ನೀಡಿದರು.

ಇಂದಿನ ಸಮಾಜದಲ್ಲಿ ಬೇಧಭಾವ ಸಹಜವಾಗಿ ಕಂಡುಬರುತ್ತಿದ್ದರೂ, ಮಹಾಪುರುಷರ ಆದರ್ಶಗಳಿಂದಲೇ ಸಮಾಜ ಉಳಿಯುತ್ತದೆ. ಪುಂಡತನ ಹಾಗೂ ಅಪರಾಧಗಳು ಹೆಚ್ಚುತ್ತಿರುವ ಈ ಸಂದರ್ಭದಲ್ಲಿ, ಮೌಲ್ಯಾಧಾರಿತ ಬದುಕು ಅತ್ಯಗತ್ಯವಾಗಿದೆ. ಆದರಿಂದ, ಸವಿತಾ ಮಹರ್ಷಿಯ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಅಭಿಪ್ರಾಯಪಟ್ಟರು.



ಸವಿತಾ ಸಮಾಜ ಕಾಯಕದ ಮೂಲಕ ಒಂದೇ ಆಗಿದ್ದು, ಒಳಗಿನ ಭಿನ್ನಾಭಿಪ್ರಾಯಗಳನ್ನು ಬಿಟ್ಟು ಎಲ್ಲರೂ ಒಂದಾಗಿ ನಿಲ್ಲಬೇಕಾಗಿದೆ. ಸಮಾಜ ಏಕತೆಯಿಂದಲೇ ರಾಜಕೀಯ ಶಕ್ತಿ ಲಭಿಸುತ್ತದೆ. ನಿಮ್ಮ ಬೆಂಬಲಕ್ಕೆ ನಾವು ಸದಾ ಇರುತ್ತೇವೆ ಎಂದು ಅಲ್ಲಮಪ್ರಭು ಪಾಟೀಲ್ ಹೇಳಿದರು.

ಸರಕಾರಿ ಮಹಾವಿದ್ಯಾಲಯ (ಸ್ವಾಯತ್ತ) ಸಹ ಪ್ರಾಧ್ಯಾಪಕರಾದ ಡಾ. ನಾಗಪ್ಪ ಗೋಗಿ ವಿಶೇಷ ಉಪನ್ಯಾಸ ನೀಡಿ, ದೇವಾನು ದೇವತೆಗಳಿಗೆ ಸವಿತಾ ಮಹರ್ಷಿ ಅವರು ಕಾಯಕ ಮಾಡಿದ್ದಾರೆ. ಅನಾದಿಕಾಲದಿಂದಲೂ ಸವಿತಾ ಸಮಾಜಕ್ಕೆ ಮನ್ನಣೆ ಇದೆ. ಆದರೆ, ಈಗಲೂ ಸಮಾಜವನ್ನು ತುಳಿಯುವ ಕೆಲಸ ಆಗುತ್ತಿವೆ. ಆದರಿಂದ, ಸವಿತಾ ಮಹರ್ಷಿ ಪೀಠ ಗುಲಬರ್ಗಾ ವಿವಿಯಲ್ಲಿ ಸ್ಥಾಪಿಸಬೇಕು. ಶಾಲಾ ಕಾಲೇಜ್‌ಗಳಲ್ಲಿ ಸವಿತಾ ಮಹರ್ಷಿಗಳ ಚರಿತ್ರೆ ಅಳವಡಿಸಬೇಕು. ಸವಿತಾ ಮಹರ್ಷಿಗಳ ಕುರಿತು ಸಂಶೋಧನೆ ಆಗಬೇಕು ಎಂದು ಮಾತನಾಡಿದರು. ಇದೇ ಸಂದರ್ಭದಲ್ಲಿ 17 ಜನ ಸಾಹಿತಿ ಹಾಗೂ ಕಲಾವಿದರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಾಶಾಸನ ವಿತರಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕಿ ಜಗದೀಶ್ವರಿ ನಾಶಿ ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ಶಾಖೆಯ ತಹಶೀಲ್ದಾರ ಪಂಪಯ್ಯ, ಸವಿತಾ ಮಹರ್ಷಿ ಸಮಾಜ ಅಧ್ಯಕ್ಷರು ಶಂಕರ.ಎಸ್. ಕಾಳನೂರು, ದೇವಿಂದ್ರಪ್ಪ ಕುರಿಹಾಳ, ರಾಜಶೇಖರ ಮಾನೆ, ಆನಂದ್ ವಾರಿಕ್, ಗಣೇಶ ಚಿನ್ನಾಕಾರ ಶರಣಬಸಪ್ಪ, ಶಶಿಕಾಂತ ಮದ್ದೂರು, ನಾಗೇಂದ್ರಪ್ಪ ವಾರಿಕ್, ಪ್ರಭಾಕರ ಪೆದ್ದರ ಪೇಟ ,ಶರಣಬಸಪ್ಪ ಸೂರ್ಯವಂಶಿ ಸೇರಿ ಅನೇಕರು ಭಾಗವಹಿಸಿದ್ದರು.

ಮತದಾರರಲ್ಲಿ ಜಾಗೃತಿ ಅಭಿಯಾನ:

ಸೈಕಲ್ ಜಾಥಾಗೆ ಚಾಲನೆ

ಕಲಬುರಗಿ,ಜ.26-

ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಮತದಾರರಲ್ಲಿ ಜಾಗೃತಿ ಜಾಥಾ ಉಂಟು ಮಾಡುವ ನಿಟ್ಟಿನಲ್ಲಿ ರವಿವಾರ ಕಲಬುರಗಿ ನಗರದಲ್ಲಿ ಸೈಕಲ್ ಜಾಥಾ ಆಯೋಜಿಸಲಾಗಿತ್ತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯಿಂದ ಆಯೋಜಿಸಿದ ಸೈಕಲ್ ಜಾಥಾಗೆ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಜಗತ್ ವೃತ್ತದಲ್ಲಿ ಚಾಲನೆ ನೀಡಿ ಸೈಕಲ್ ತುಳಿಯುವ ಮೂಲಕ ಯುವಕರಿಗೆ ಪ್ರೇರೇಪಿಸಿದರು.



ಜಗತ್ ವೃತ್ತದಿಂದ ಆರಂಭ ಗೊಂಡ ಜಾಥಾ ಡಿ.ಸಿ. ಕಚೇರಿ ವರೆಗೂ ಸಾಗಿತ್ತು.ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಅವರು ಸೈಕಲ್ ತುಳಿದು ಸಂತಸಪಟ್ಟರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಂಗಮೇಶ, ತಹಶೀಲ್ದಾರ ಆನಂದ ಶೀಲ, ತಾಲೂಕಾ ಪಂಚಾಯತ್ ಇ.ಓಗಳಾದ ಸೈಯದ್ ಪಟೇಲ್, ಮಾನಪ್ಪ ಕಟ್ಟಿಮನಿ, ಕ್ರೀಡಾ ಇಲಾಖೆಯ ಸಂಜಯ ಬಾಣದ, ಪ್ರವೀಣ ಪುಣೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಯುವಕರು, ಸೈಕ್ಲಿಸ್ಟ್‌ಗಳು ಜಾಥಾದಲ್ಲಿ ಭಾಗಿಯಾಗಿದ್ದರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಬಳ್ಳಾರಿ ಪ್ರವಾಸ

ಬಳ್ಳಾರಿ,ಜ.26-

ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಅವರು ಜ.26ರಂದು ಬಳ್ಳಾರಿ ಜಿಲ್ಲೆ ಪ್ರವಾಸ ಕೈಗೊಂಡಿದ್ದಾರೆ.

ಜ.26 ರಂದು ಬೆಳಿಗ್ಗೆ 8.20 ಕ್ಕೆ ನಗರದ ರಾಜಕುಮಾರ್ ಉದ್ಯಾನವನದಲ್ಲಿರುವ ಮಹಾತ್ಮ ಗಾಂಧೀಜಿ ಪ್ರತಿಮೆಗೆ ಗೌರವ ಸಮರ್ಪಣೆ ಮಾಡುವರು. ಬೆಳಿಗ್ಗೆ 8.30 ಗಂಟೆಗೆ ಎಚ್.ಆರ್. ಗವಿಯಪ್ಪ ವೃತ್ತದಲ್ಲಿ (ಮೋತಿ ಸರ್ಕಲ್) 150 ಅಡಿ ಎತ್ತರದ ರಾಷ್ಟ್ರಧ್ವಜಾರೋಹಣ ನೆರವೇರಿಸುವರು.

ಬಳಿಕ ಬೆಳಿಗ್ಗೆ 8.50 ಗಂಟೆಗೆ ಬಿಎಂಸಿಆರ್ ಕಾಲೇಜು ಮುಂಭಾಗದ ಮಹಾತ್ಮ ಗಾಂಧಿ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವರು. ನಂತರ ಬೆಳಿಗ್ಗೆ 09 ಗಂಟೆಗೆ ಬಿಎಂಸಿಆರ್ಸಿ ಕಾಲೇಜು ಮೈದಾನದಲ್ಲಿ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಬಳಿಕ ಪಥಸಂಚಲನ ವೀಕ್ಷಣೆ ಮಾಡಿ ಗೌರವ ವಂದನೆ ಸ್ವೀಕರಿಸುವರು. ತರುವಾಯ ಗಣರಾಜ್ಯೋತ್ಸವ ಸಂದೇಶ ನೀಡುವರು. ಇದೇ ವೇಳೆ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.



ಪ್ರತಿಯೊಬ್ಬರೂ ನುರಿತ ವೈದ್ಯರಲ್ಲಿ ಹೋಗಿ ತಪಾಸಣೆ ಮಾಡಿಸಿಕೊಳ್ಳಿ

ಕೆಂಭಾವಿ,ಜ.26-

ಪರಿಸರದಲ್ಲಿ ಆಗುತ್ತಿರುವ ಬದಲಾವಣೆಯಿಂದ ಇಂದಿನ ದಿನಗಳಲ್ಲಿ ಪ್ರತಿಯೊಬ್ಬರಲ್ಲಿ ಸಾಮಾನ್ಯ ರೋಗಗಳು ಕಾಣಿಸಿಕೊಳ್ಳುತ್ತಿದ್ದು ಪ್ರತಿಯೊಬ್ಬರೂ ನುರಿತ ವೈದ್ಯರಲ್ಲಿ ಹೋಗಿ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ನಮ್ಮ ಕ್ಲಿನಿಕ್ ವೈದ್ಯಾಧಿಕಾರಿ ಡಾ. ಪೂಜಾ ಪಾಟೀಲ ಹೇಳಿದರು.

ಪಟ್ಟಣದ ಸಂಜೀವನಗರ ಬಡಾವಣೆಯ ನಮ್ಮ ಕ್ಲಿನಿಕ್ ವತಿಯಿಂದ ಸಂಜೀವಾಂಜನೇಯ ದೇವಸ್ಥಾನದಲ್ಲಿ ಶನಿವಾರ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರುರೀ ಬಾರಿಯ ವಿಪರೀತ ಚಳಿ ಮತ್ತು ಶೀತಗಾಳಿಯಿಂದ ಹಲವರಲ್ಲಿ ಜ್ವರ, ಕೆಮ್ಮು, ನೆಗಡಿಯಂಥಾ ಸಾಮಾನ್ಯ ರೋಗಗಳು ಕಂಡು ಬರುತ್ತಿದ್ದು ಅವುಗಳನ್ನು ನಿರ್ಲಕ್ಷ ಮಾಡದೆ ರೋಗ ಲಕ್ಷಣಗಳು ಕಂಡು ಬಂದಾಗ ವೈದ್ಯರನ್ನು ಕಂಡು ಸೂಕ್ತ ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಿದರು.

ಸಾಮಾನ್ಯ ಜನತೆಗೂ ಉಚಿತ ಸೂಕ್ತ ಚಿಕಿತ್ಸೆ ಸಿಗಬೇಕು ಎಂಬ ಉದ್ದೇಶದಿಂದ ಇಲಾಖೆಯ ಆದೇಶ ಹಾಗೂ ಹಿರಿಯ ಅಧಿಕಾರಿಗಳ ಸಲಹೆ ಮೇರೆಗೆ ನಮ್ಮ ಕ್ಲಿನಿಕ್ ವತಿಯಿಂದ ಪ್ರತಿ ತಿಂಗಳು ಪ್ರತಿಯೊಂದು ಬಡಾವಣೆಯಲ್ಲಿ ಇಂಥಾ ಉಚಿತ ಚಿಕಿತ್ಸೆ ಕಾರ್ಯವನ್ನು ಮಾಡುತ್ತಿದ್ದು ಜನತೆ ಇದರ ಲಾಭ ಪಡೆಯುವಂತೆ ಮನವಿ ಮಾಡಿದರು.

ಅರ್ಚಕ ಆನಂದ ಕುಲಕರ್ಣಿ ಚಿಕಿತ್ಸಾ ಶಿಬಿರ ಉದ್ಘಾಟಿಸಿದರು, ಭೀಮನಗೌಡ ಮಲಕಾಪೂರ, ರುದ್ರಗೌಡ ಕಾಚಾಪೂರ, ಉದಯಕುಮಾರ ಕುಲಕರ್ಣಿ, ಅಣ್ಣಾರಾಯ ಕರ್ನಾಳ, ನಿಂಗಣ್ಣ ಕೀಲಿ, ಶೀವಶರಣಪ್ಪ ಬೈಚಬಾಳ, ನಮ್ಮ ಕ್ಲಿನಿಕ್ ಸಿಬ್ಬಂದಿಗಳಾದ ಅಂಬಿಕಾ, ಮಂಜಮ್ಮ, ಅನಿಲ, ರಾಜು ಯರಗಲ್ ಇದ್ದರು.

ರಾಷ್ಟ್ರೀಯ ಮತದಾರರ ದಿನಾಚರಣೆ : ವಿಜೇತರಿಗೆ ಬಹುಮಾನ ವಿತರಣೆ

ಮತದಾನದಿಂದ ಪ್ರಜಾಪ್ರಭುತ್ವ ಬಲಿಷ್ಠ

ಬಾಗಲಕೋಟೆ:,ಜ.26-

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಆಧಾರ ಸ್ತಂಭವಾಗಿರುವ ಮತದಾನದ ಹಕ್ಕನ್ನು ಚಲಾಯಿಸುವ ಮೂಲಕ ಉತ್ತಮ ನಾಯಕನನ್ನು ಆಯ್ಕೆ ಮಾಡಿ ಬಲಿಷ್ಟವಾದ ಪ್ರಜಾಪ್ರಭುತ್ವ ನಿರ್ಮಾಣ ಮಾಡಲು ಮುಂದಾಗಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ್ ಹೇಳಿದರು.

ತೋವಿವಿಯ ಸಭಾಭವನದಲ್ಲಿ ಶನಿವಾರ ಭಾರತ ಚುನಾವಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ನ್ಯಾಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಪೊಲೀಸ್ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಇತ್ತೀಚೆಗೆ ಯುವ ಮತದಾರರು ಮತದಾನ ಮಾಡಲು ಹಿಂದೇಟು ಹಾಕುತ್ತಿದ್ದಾರೆ. ಆದರೆ ನಮ್ಮನ್ನು ಆಳುವ ನಾಯಕನನ್ನು ಆಯ್ಕೆ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲೆ ಇದ್ದು, ಮತದಾನದ ಹಕ್ಕನ್ನು ಚಲಾಯಿಸುವುದು ನಮ್ಮ ಕರ್ತವ್ಯವಾಗಿದೆ ಎಂದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಪ್ರತಿಜ್ಞಾವಿಧಿ ಭೋದಿಸಿ ಮಾತನಾಡಿದ ಅವರು ಮತದಾನದ ಪವಿತ್ರತೆಯನ್ನು ಅರಿಯಲು ಮತದಾನ ದಿನಾಚರಣೆ ಆಚರಿಸಲಾಗುತ್ತಿದೆ. ಮೂಲಭೂತ ಹಕ್ಕುಗಳಲ್ಲಿ ಮತದಾನ ಮಾಡುವುದು ಕೂಡಾ ಪ್ರತಿಯೊಬ್ಬರ ಹಕ್ಕಾಗಿದೆ. ಇತ್ತೀಚಿನ ಚುನಾವಣೆಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚು ಮತದಾನವಾಗುತ್ತಿದೆ. ಆದರೆ ನಗರ ಪ್ರದೇಶಗಳಲ್ಲಿ ಮತದಾನ ಕುಂಟಿತಗೊಳ್ಳುತ್ತಿದೆ. ಮತದಾನದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಬೇಕಿದೆ. ಪ್ರಜ್ಞಾವಂತ ನಾಗರಿಕರು ದೇಶದ ಭವಿಷ್ಯಕ್ಕಾಗಿ ಪ್ರಜಾಪ್ರಭುತ್ವದಲ್ಲಿ ತಮಗೆ ನೀಡಿರುವ ಮತದಾನದ ಹಕ್ಕನ್ನು ಚಲಾಯಿಸಲು ಮುಂದಾಗಬೇಕಿದೆ ಎಂದು ತಿಳಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಪ್ರತಿಯೊಬ್ಬ ನಾಗರಿಕ ಮತದಾರರ ಹಕ್ಕು ಪಡೆದಿದ್ದು, ಪ್ರತಿಯೊಂದು ಚುನಾವಣೆಯಲ್ಲಿ ಯಾವುದೇ ಆಮೀಷಕ್ಕೆ ಒಳಗಾಗದೆ ಮತದಾನದ ಹಕ್ಕನ್ನು ಚಲಾಯಿಸುವಂತಾಗಬೇಕು. ಪ್ರತಿಯೊಬ್ಬರು ಮತದಾನ ಮಾಡದೇ ಇದ್ದರೆ ಉತ್ತಮ ನಾಯಕನನ್ನು ಆಯ್ಕೆ ಮಾಡಲು ಸಾಧ್ಯವಾಗುವದಿಲ್ಲ. ಪ್ರಜಾಪ್ರಭುತ್ವ ಬಲಿಷ್ಟವಾಗಬೇಕಾದರೆ, ಪ್ರತಿಯೊಬ್ಬರು ತಮಗೆ ದೊರೆತಿರುವ ಮತದಾನ ಹಕ್ಕನ್ನು ಚಲಾಯಿಸಿದಾಗ ಮಾತ್ರ ಸಾಧ್ಯವೆಂದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಮತದಾನದ ದಿನಾಚರಣೆ ಅಂಗವಾಗಿ ಪ್ರೌಢ, ಪದವಿ ಪೂರ್ವ ಹಾಗೂ ಪದವಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಿಗೆ ಪ್ರಮಾಣ ಪತ್ರಗಳನ್ನು ವಿತರಣೆ, ಚುನಾವಣೆಗೆ ಸಂಬಂಧಿಸಿದ ಜಿಲ್ಲಾ ಮತ್ತು ತಾಲೂಕಾ ಮಟ್ಟದ ಉತ್ತಮ ತರಬೇತಿದಾರರಿಗೆ ಪ್ರಮಾಣ ಪತ್ರ ನೀಡಲಾಯಿತು. ಅಲ್ಲದೇ ಸಾಂಕೇತಿಕವಾಗಿ ಯುವ ಮತದಾರರಿಗೆ ಮತದಾರರ ಗುರುತಿನ ಚೀಟಿಯನ್ನು ವಿತರಣೆ ಸಹ ಮಾಡಲಾಯಿತು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ತೋವಿವಿಯ ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮತದಾನ ಜಾಗೃತಿಗಾಗಿ ಸಂಡೇ ಆನ್ ಸೈಕಲ್ ಅಭಿಯಾನ

ಕಾರ್ಯಕ್ರಮ ಪೂರ್ವದಲ್ಲಿ ಜಿಲ್ಲಾಡಳಿತ, ಜಿ.ಪಂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ 16ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಫಿಟ್ ಇಂಡಿಯಾ ಸೈಕ್ಲಿಂಗ್ ಅಡಿಯಲ್ಲಿ ಹಮ್ಮಿಕೊಂಡ ಸಂಡೇ ಆನ್ ಸೈಕಲ್ ಅಭಿಯಾನಕ್ಕೆ ಜಿ.ಪಂ ಸಿಇಓ ಶಶಿಧರ ಕುರೇರ ಚಾಲನೆ ನೀಡುವ ಮೂಲಕ ಅಭಿಯಾನದಲ್ಲಿ ಪಾಲ್ಗೊಂಡರು. ಸೈಕಲ್ ಅಭಿಯಾನ ಜಿಲ್ಲಾಡಳಿತದಿಂದ ಪ್ರಾರಂಭವಾಗಿ ನಗರದ ನಾನಾ ಸಂಚರಿಸಿ ಕೊನೆಗೆ ಜಿಲ್ಲಾ ಕ್ರೀಡಾಂಗಣಕ್ಕೆ ಮುಕ್ತಾಯಗೊಂಡಿತು. ಅಭಿಯಾನದಲ್ಲಿ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಸೈಕ್ಲಿಂಗ್ ತರಬೇತಿಗಾರ್ತಿ ಅನಿತಾ ನಿಂಬರಗಿ ಪಾಲ್ಗೊಂಡಿದ್ದರು.

ಒಂದನೇಯ ಪುಟದಿಂದ

77ನೇ ಗಣರಾಜ್ಯೋತ್ಸವ: ಉಸ್ತುವಾರಿ ಸಚಿವ ಶರಣಪ್ರಕಾಶ ಧ್ವಜಾರೋಹಣ

ಮುಂದಿನ ದಿನಗಳಲ್ಲಿ ಸಂಪೂರ್ಣ ಸಮಾನತೆ, ಒಕ್ಕೂಟ ವ್ಯವಸ್ಥೆ ಉಳಿಸಿಕೊಂಡು ಹೋಗಬೇಕು. ಕೇಂದ್ರ ಮತ್ತು ರಾಜ್ಯಗಳ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಮತ್ತು ನಿಷ್ಪಕ್ಷಪಾತ, ನಿಸ್ವಾರ್ಥ ಭಾವದಿಂದ ಕೆಲಸ ಮಾಡಬೇಕು ಎಂದರು.

2013 ರಲ್ಲಿ ಯುಪಿಎ ಸರ್ಕಾರವು ಸಂವಿಧಾನದಲ್ಲಿ ತಿದ್ದುಪಡಿ 371ಜೆ ಕಲಂ ಜಾರಿಗೆ ತಂದಿತು. ಹೈದರಾಬಾದ್ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಈ ಕ್ರಮ ಬಹಳ ಪರಿಣಾಮಕಾರಿಯಾಗಿದೆ. ಮಲ್ಲಿಕಾರ್ಜುನ ಖರ್ಗೆಯವರ ಶ್ರಮದ ಮೂಲಕ ಕಳೆದ 10 ವರ್ಷಗಳಲ್ಲಿ 1 ಲಕ್ಷ ಉದ್ಯೋಗ ಸೃಷ್ಟಿಯಾಗಿದ್ದು, ಸಾವಿರಾರು ಇಂಜಿನಿಯರ್‌ಗಳು ಹಿರಿತನ ತಲುಪಿದ್ದಾರೆ. ಪ್ರತಿ ವರ್ಷ ₹5,000 ಕೋಟಿ ಹೂಡಿಕೆಯಾಗುತ್ತಿದೆ. ಗ್ಯಾರಂಟಿ ಯೋಜನೆಯ ಮೂಲಕ ಈ ಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ರಾಜ್ಯವನ್ನು ಸಮೃದ್ಧ, ಪ್ರಗತಿಪರವನ್ನಾಗಿಸಲು ಹಲವು ಯೋಜನೆಗಳನ್ನು ಯಶಸ್ವಿಯಾಗಿ ಪ್ರಾರಂಭಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ನಿರ್ಮಾಣದ ಬೇಡಿಕೆಗೆ ಸ್ಪಂದಿಸಿ ಕ್ರಮ ಕೈಗೊಳ್ಳಲಾಗಿದೆ. ಏಮ್ಸ್ ಸ್ಥಾಪನೆಗಾಗಿ ಪ್ರಯತ್ನಗಳು ನಡೆಯುತ್ತಿವೆ. ಪಾರದರ್ಶಕ ಆಡಳಿತಕ್ಕಾಗಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಲಾಗಿದೆ ಎಂದು ತಿಳಿಸಿದರು.

ಯುಪಿಎ ಸರ್ಕಾರ ಜಾರಿಗೊಳಿಸಿದ್ದ ಮನರೇಗಾ ಕಾಯ್ದೆಯನ್ನು ಬದಲಾಯಿಸಿದ ಕೇಂದ್ರ ಸರ್ಕಾರ, ಒಕ್ಕೂಟ ವ್ಯವಸ್ಥೆಗೆ ಧಕ್ಕೆ ನೀಡಿದೆ. ಮನರೇಗಾ ಗ್ರಾಮೀಣ ಜನರಿಗೆ ಮತ್ತು ಭೂರಹಿತರಿಗೆ ಉದ್ಯೋಗ ಖಾತರಿ ನೀಡುತ್ತಿತ್ತು. ಜನರು ಕೆಲಸಕ್ಕಾಗಿ ಗ್ರಾಮ ಪಂಚಾಯತ್‌ಗೆ ಅರ್ಜಿ ಸಲ್ಲಿಸಿದರೆ ಕೆಲಸ ದೊರಕುತ್ತಿತ್ತು; ಇಲ್ಲದಿದ್ದರೆ ನಿರುದ್ಯೋಗ ಭತ್ಯೆ ದೊರಕುತ್ತಿತ್ತು. ಆದರೆ ಕೇಂದ್ರ ಸರ್ಕಾರವು ರಾಜ್ಯಗಳ ಅಭಿಪ್ರಾಯವನ್ನು ಕೇಳದೆ ಗಣತಂತ್ರಕ್ಕೆ ವಿರುದ್ಧವಾದ ನೀತಿಗಳನ್ನು ಅನುಸರಿಸಿದೆ. ಬಡವರ ಹಕ್ಕು ಕಸಿದುಕೊಳ್ಳಲು ಯಾರಿಗೂ ಅಧಿಕಾರವಿಲ್ಲ. ಮನರೇಗಾ ಪುನಃ ಜಾರಿಗೆ ಬರಬೇಕು ಎಂದು ಹೇಳಿದರು.

ಸಂವಿಧಾನಕ್ಕಿಂತ ದೊಡ್ಡವರು ಯಾರೂ ಇಲ್ಲ; ದೇಶ ಕಟ್ಟಲು ಕೇಂದ್ರ-ರಾಜ್ಯ ಸರ್ಕಾರಗಳು ನಿಸ್ವಾರ್ಥವಾಗಿ ಕಾರ್ಯನಿರ್ವಹಿಸಬೇಕು. ಪ್ರಜೆಗಳಾದ ನಾವೆಲ್ಲಾ ದೇಶಭಕ್ತಿ ಅಳವಡಿಸಿಕೊಳ್ಳಬೇಕು. ಎಲ್ಲರನ್ನೂ ಸಮಾನವಾಗಿ ಕಾಣಬೇಕು, ಗೌರವಿಸಬೇಕು ಎಂದರು.

ವಡವಟ್ಟಿಯಲ್ಲಿ 77ನೇ ಗಣರಾಜ್ಯೋತ್ಸವ ಆಚರಣೆ

ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಮಕ್ಕಳು ವಿವಿಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪೆನ್ನು, ಕಾಫಿ ಬಹುಮಾನ ವಿತರಣೆ ಮಾಡಲಾಯಿತು. ನಂತರ ಸಿಹಿ ವಿತರಿಸಲಾಯಿತು.

ರಂಗಮ್ಮ , ಕುಸುಮ ರಾಣಿ, ಲಿಂಗಪ್ಪ ಹುಂಚೆಡಿ, ವೆಂಕೋಬ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಇದ್ದರು. ವೇದಿಕೆ ಮೇಲೆ ಲಕ್ಷ್ಮೀದೇವಿ ದಿ.ವೆಂಕೋಬಣ್ಣ, ಅನಿತಾಸಾಗರ, ರಾಘವೇಂದ್ರ ಸಾಗರ, ಭುವನೇಶ್ವರಿ ಕಟ್ಟಿಮನಿ, ತಿಮ್ಮಣ್ಣ ಬಾಲಗುಡ್ಡ, ಮೌನೇಶ ಬ್ಯಾಂಕ್ ಮ್ಯಾನೇಜರ್, ವೆಂಕಟೇಶ ಜಿ.ರಾಯಚೂರು,ಹೊನ್ನಪ್ಪ ಗ್ರಾ.ಪಂ.ಸದಸ್ಯರು, ಶಿವಪ್ಪ ಅನ್ವರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಶಿವು ಭಕ್ತಿಗೀತೆ ಹಾಡಿದರು.

ಜಿಲ್ಲೆಯಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ ಫಲಿತಾಂಶ ಸುಧಾರಣೆಗೆ ಒತ್ತು

ನಿರ್ದಾಕ್ಷಿಣ್ಯ ಕ್ರಮ ವಹಿಸಿ ಅಕ್ರಮ ಮರಳು ಸಾಗಣೆ, ಇಸ್ಪಿಟ್, ಜೂಜು ದಂಧೆಗಳನ್ನು ನಿಗ್ರಹಿಸಲು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಪೂರ್ಣ ಸ್ವಾತಂತ್ರ್ಯ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ

ಶಾಸಕರಾದ ಬಸನಗೌಡ ದದ್ದಲ್, ಎ ವಸಂತಕುಮಾರ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ಉಪಾಧ್ಯಕ್ಷ ರಾದ ಬಶೀರ್ ಅಹ್ಮದ್, ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರಾದ ಪವನ ಕಿಶೋರ ಪಾಟೀಲ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಪಂ ಸಿಇಓ ಈಶ್ವರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಝೋನಲ್ ಆಯುಕ್ತರಾದ ಪುರುರಾಜ ಸಿಂಗ್, ರಾಜ್ಯ ನೀತಿ ಆಯೋಗದ ಸದಸ್ಯರಾದ ಡಾ.ರಝಾಕ್ ಉಸ್ತಾದ್ ಇದ್ದರು.

ಕುರ್ಡಿ:77ನೇ ಗಣರಾಜ್ಯೋತ್ಸವ ಆಚರಣೆ

ಹಫೀಸ್, ನರಸಪ್ಪ ಜಗ್ಲಿ, ಈರಣ್ಣ ನಾಯಕ, ಆದೂ ಪಾಷಾ, ಮಲ್ಲಯ್ಯ ಮಾರೇಶ್ ಕಬ್ಬೆರ್, ಹನುಮೇಶ ಭೋವಿ, ಸುನಿಲ್ ಕುಮಾರ, ದೇವರಾಜ್ ನಾಯಕ, ಸಂಗಪ್ಪ, ಚಿನ್ನಪ್ಪ, ನಾಗರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅದೇ ರೀತಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರಾದ ಅಬ್ದುಲ್ ರಜಾಕ್, ಭೀಮಯ್ಯ ಕೊಂಬಿನ್, ನಾಗರಾಜ್ ಹೂಗಾರ, ಹಾಗೂ ಗ್ರಾಮ ಮುಖಂಡರಾದ ಭೀಮಣ್ಣ ನಾಯಕ, ಪ್ರಭಾಕರ್ ಚೆನ್ನಯ್ಯ, ನಾಗೇಶ, ಲಕ್ಷ್ಮಣ ಭೋವಿ, ಪ್ರಭಾಕರ್ ಶೆಟ್ಟಿ, ಶಾಂತಪ್ಪ ಗೌಡ, ಬಸಿರ್ ಅಹಮದ್, ಹುಚ್ಚಪ್ಪ, ಸಿರಾಜ್ ಖಾನ್, ಮನೋರಾಜ, ಮಾರೆಪ್ಪ ಛಲವಾದಿ, ಇಸ್ಮೈಲ್, ಪ್ರಭುನಾ ಯಕ, ನಾಗೇಶ್ ಛಲವಾದಿ, ಮೆಹಬೂಬ್ ಪಾಷಾ, ಬಸವರಾಜ್ ಹೂಗಾರ, ಈರಣ್ಣ ಕುರ್ಡಿ, ನರಸಪ್ಪ, ವಿಜಯ್ ದೇಸಾಯಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಎಲ್ಲಾ ಶಾಲೆಗಳ ಎಸ್‌ಡಿಎಂಸಿ ಅಧ್ಯಕ್ಷರು, ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ಸರ್ಕಾರಿ ನೌಕರರು, ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರು ಹಾಗೂ ಸದಸ್ಯರು, ಗ್ರಾಮ ಪಂಚಾಯತ್ ಸಿಬ್ಬಂದಿ ವರ್ಗ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ವಿವಿಧ ಸಂಘಸಂಸ್ಥೆಗಳ ಮುಖಂಡರು, ಗ್ರಾಮದ ರೈತರು, ಹಿರಿಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಶೋಭೆ ತಂದರು. ಗಣರಾಜ್ಯೋತ್ಸವವು ಕುರ್ಡಿ ಗ್ರಾಮದಲ್ಲಿ ಐಕ್ಯತೆ, ಸಮಾನತೆ ಮತ್ತು ಸಂವಿಧಾನ ಬದ್ಧ ಮೌಲ್ಯಗಳ ಸಂದೇಶವನ್ನು ಸಾರಿತು.

ಜಾಗೃತ ಮತದಾರರೇ ಬಲಿಷ್ಠ ರಾಷ್ಟ್ರದ ಆಧಾರ-ಡಿಸಿ



ಬೀದರ, ಜ.26-

ಜಾತಿ, ಹಣ, ಧರ್ಮ, ಯಾವುದೇ ಆಮಿಷಕ್ಕೆ ಒಳಗಾಗದೆ ಯುವಕರು ನೈತಿಕವಾಗಿ ಮತದಾನ ಮಾಡಬೇಕು, ರಾಷ್ಟ್ರೀಯ ಮತದಾನದ ದಿನವನ್ನು ಪ್ರತಿ ವರ್ಷ ಒಂದೊಂದು ಧ್ಯೇಯವಾಕ್ಯದೊಂದಿಗೆ ದೇಶಾದ್ಯಂತ ಆಚರಿಸಲಾಗುತ್ತದೆ. ಈ ಬಾರಿ ನನ್ನ ಭಾರತ ನನ್ನ ಮತ ಎಂಬ ಧ್ಯೇಯದೊಂದಿಗೆ ಆಚರಿಸಲಾಗುತ್ತಿದೆ. ಮತದಾನವು ಪ್ರಜಾಪ್ರಭುತ್ವದ ಪ್ರಮುಖ ಅಸ್ತ್ರವಾಗಿದೆ. ಪ್ರತಿಯೊಬ್ಬ ನಾಗರಿಕನಿಗೂ ಮತದಾನ ಮಾಡುವ ಹಕ್ಕು ಇದೆ. ಜಾಗೃತ ಮತದಾರರೇ ಬಲಿಷ್ಠ ರಾಷ್ಟ್ರದ ಆಧಾರ ಆಚರಣೆ ಮಾಡುತ್ತಿದ್ದೇವೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.

ಅವರು ರವಿವಾರ ನಗರದ ಪೂಜ್ಯ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಭಾರತೀಯ ಚುನಾವಣಾ ಆಯೋಗ, ಜಿಲ್ಲಾಡಳಿತ ಹಾಗೂ ಸ್ವೀಪ್ ಸಮಿತಿ ವತಿಯಿಂದ ಆಯೋಜಿಸಿದ ರಾಷ್ಟ್ರೀಯ ಮತದಾರರ ದಿನ -2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು,

ಮತದಾನವು ಹಕ್ಕಿನ ಜೊತೆಗೆ ಕರ್ತವ್ಯವೂ ಆಗಿದೆ. ಪ್ರತಿಯೊಬ್ಬರೂ ನಿರ್ಭಯವಾಗಿ ಮತ ಚಲಾಯಿಸಬೇಕು. ಯುವಕರು ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಜವಾಬ್ದಾರಿಯುತ ಮತದಾನದಿಂದ ದೇಶದ ಅಭಿವೃದ್ಧಿ ಸಾಧ್ಯ ಎಂದ ಅವರು 18 ವರ್ಷ ತುಂಬಿದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಣಿ ಮಾಡಿಕೊಳ್ಳಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ಮಾತನಾಡಿ, ಭಾರತದಲ್ಲಿ ಬಲಿಷ್ಟವಾದ ಪ್ರಜಾಪ್ರಭುತ್ವ ವ್ಯವಸ್ಥೆ ಇರುವುದರಿಂದಾಗಿ ನಮಗೆಲ್ಲ ಮಾತನಾಡುವ ಹಕ್ಕು ಇದೆ. ಆದರೆ ನಮ್ಮ ದೇಶದ ಪಕ್ಕದ ರಾಜ್ಯ ಅಪಘಾನಿಸ್ತಾನದಲ್ಲಿ ಏಕ ಚಕ್ರಾಧಿಪತ್ಯ ಆಳ್ವಿಕೆಯಿದ್ದು ನಮ್ಮಂತೆ ಅಲ್ಲಿನ ಪ್ರಜೆಗಳಿಗೆ ವೈಯಕ್ತಿಕ ಸ್ವಾತಂತ್ರ ಇರುವುದಿಲ್ಲ. ಬಲಿಷ್ಠ ಪ್ರಜಾಪ್ರಭುತ್ವಕ್ಕೆ ನಾವೆಲ್ಲರೂ ಕಡ್ಡಾಯವಾಗಿ ಮತದಾನ ಮಾಡಲೇಬೇಕು. ಮತದಾನದ ಹಕ್ಕು ಸಂವಿಧಾನ ನಮಗೆ ನೀಡಿರುವ ಅತ್ಯಂತ ಶ್ರೇಷ್ಠ ಅಧಿಕಾರವಾಗಿದೆ. ಇದು ಮಾರಾಟದ ವಸ್ತುವಲ್ಲ, ಬದಲಾಗಿ ದೇಶದ ಭವಿಷ್ಯ ರೂಪಿಸುವ ಜವಾಬ್ದಾರಿ ಆಗಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ ಮಾತನಾಡಿ, ತಪ್ಪದೆ ಕಡ್ಡಾಯವಾಗಿ ಮತದಾನ ಮಾಡೋದು ನಮ್ಮ ಹಕ್ಕು, ಹೊಣೆ ಮತ್ತು ದೇಶದ ಶಕ್ತಿ. ಮತದಾನ ಮಾಡಿದರೆ ನಮ್ಮ ಅಭಿಪ್ರಾಯ ಸರ್ಕಾರಕ್ಕೆ ತಲುಪುತ್ತದೆ ಸರಿಯಾದ ನಾಯಕರನ್ನು ಆಯ್ಕೆ ಮಾಡೋ ಅವಕಾಶ ಸಿಗುತ್ತದೆ ಭವಿಷ್ಯದ ಅಭಿವೃದ್ಧಿಗೆ ನಾವು ಸಹ ಪಾಲುಗಾರರಾಗುತ್ತೇವೆ, 18 ವರ್ಷ ತುಂಬಿದ ಮೇಲೆ ಮಾತ್ರ ನೀವು ಅಧಿಕೃತವಾಗಿ ಮತದಾನ ಮಾಡಲು ಅವಕಾಶ ಇದೆ, ಕಡ್ಡಾಯವಾಗಿ ಒಂದು ವರ್ಷದಲ್ಲಿ ನಾಲ್ಕು ಬಾರಿ ನೋಂದಣಿ ಮಾಡಲು ಅವಕಾಶ ಕಲ್ಪಿಸಲಾಗಿದೆ ಆದಕಾರಣ ಮತದಾರರ ಪಟ್ಟಿಯಲ್ಲಿ 18 ವರ್ಷಗಳ ಮೇಲ್ಪಟ್ಟ ಯುವಕ ಯುವತಿಯರು ನೋಂದಣಿ ಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಶಿವಕುಮಾರ್ ಕರಾಳೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

2026 ರ ರಾಷ್ಟ್ರೀಯ ಮತದಾರರ ದಿನಾಚರಣೆಯ ನಿಮಿತ್ತ ನಡೆದ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಗಳಲ್ಲಿ ಪ್ರೌಢ ಶಾಲೆಯಲ್ಲಿ ಪ್ರಥಮ ಸ್ಥಾನ 9ನೇ ತರಗತಿಯ ಐಶ್ವರ್ಯ ಸಂಜುಕುಮಾರ್ ಪ್ರೌಢ ಶಾಲೆ ಮಳಚಾಪುರ ಭಾಲ್ಕಿ, ದ್ವಿತೀಯ ಸ್ಥಾನ ಪೂಜಾ ಗುಂಡಪ್ಪಾ ಶ್ರೀ ಜಬಿಕೆ ಪ್ರೌಢ ಶಾಲೆ ಬಸವಕಲ್ಯಾಣ, ತೃತೀಯ ಸ್ಥಾನ ಸೇವಂತಿ ವಿಜಯಕುಮಾರ ಇಂದಿರಾಬಾಯಿ ಶೆಟ್ಕಾರ ಪ್ರೌಢ ಶಾಲೆ ಬೀದರ, ಅದೆ ರೀತಿ ಪಿಯು ವಿಭಾಗದಲ್ಲಿ ಲಕ್ಷ್ಮಿ ಜವಾಹರ ಪ್ರಥಮ ಸ್ಥಾನ ಕರ್ನಾಟಕ ಪಿಯು ಕಾಲೇಜು , ಅರ್ಚನಾ ತುಕಾರಾಮ ದ್ವಿತೀಯ ಸ್ಥಾನ ಸಿದ್ಧಾರ್ಥ ಪಿಯು ಕಾಲೇಜು ಬೀದರ , ಶ್ರುತಿ ಗುಟ್ಟೆಪ್ಪಾ ತೃತೀಯ ಸ್ಥಾನ ಸರ್ಕಾರಿ ಪಿಯು ಕಾಲೇಜು ಮಂದಕನಳ್ಳಿ, ಪದವಿ ಮಟ್ಟದಲ್ಲಿ ಕರ್ನಾಟಕ ಕಾಲೇಜಿನ ಕಲಾ ಮತ್ತು ವಾಣಿಜ್ಯ ವಿಜ್ಞಾನ ಕಾಲೇಜು ಬೀದರನ ಭುವನೇಶ್ವರಿ ಬಿ, ಪ್ರಥಮ ಸ್ಥಾನ ಹಾಗೂ ರಾಜ್ಯಮಟ್ಟಕ್ಕೆ ಆಯ್ಕೆ, ದ್ವಿತೀಯ ಸ್ಥಾನ ಸಂದೀಪ ಕೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಚಿಟಗುಪ್ಪಾ, ತೃತೀಯ ಸ್ಥಾನ ಶಿವಾನಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನೌಬಾದ ಬೀದರ ಪಡೆದಿರುತ್ತಾರೆ,

ಅತ್ಯುತ್ತಮ ಬೂತ ಮಟ್ಟದ ಪ್ರದರ್ಶನದಲ್ಲಿ ಪ್ರಥಮ ಸ್ಥಾನ ರವಿಕಾಂತ್ ಬಸವಕಲ್ಯಾಣ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಗೌರ, ದ್ವಿತೀಯ ಸ್ಥಾನ ಇಂದ್ರನಾಥ್ ಹುಮನಾಬಾದ, ತೃತೀಯ ಸ್ಥಾನ ಸೈಯದ್ ಅಜುರುದ್ದಿನ ಬೀದರ ದಕ್ಷಿಣ, ಓಂಕಾರ್ ಪಾಟೀಲ್ ಬೀದರ ನಗರ, ನಾಲ್ಕನೇ ಸ್ಥಾನ ಭರತ್ ಭೂಷಣ್ ಭಾಲ್ಕಿ, ಐದನೇ ಸ್ಥಾನ ಕಲ್ಯಾಣರಾವ ಔರಾದ ಪಡೆದುಕೊಂಡಿರುತ್ತಾರೆ. ಇದೇ ಸಂದರ್ಭದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುತ್ತೇವೆ ಮತ್ತು ಯಾವುದೇ ಪ್ರಭಾವಕ್ಕೆ ಒಳಗಾಗದೆ ಮತ ಚಲಾಯಿಸುತ್ತೇವೆ ಎಂದು ಎಲ್ಲರೂ ಪ್ರತಿಜ್ಞೆ ಸ್ವೀಕರಿಸಿದರು. ಕಾರ್ಯಕ್ರಮಕ್ಕೂ ಮುಂಚಿತವಾಗಿ ವಿವಿಧ ಶಾಲಾ-ಕಾಲೇಜಿನ ಮಕ್ಕಳಿಂದ ಶಿವಾಜಿ ವೃತ್ತದಿಂದ ಪೂಜ್ಯ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರದವರೆಗೆ ಜಾಥಾ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಬೀದರ ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ, ಬೀದರ ಸಹಾಯಕ ಆಯುಕ್ತ ಮೊಹ್ಮದ್ ಶಕೀಲ್, ಗೌತಮ್ ಅರಳಿ ಸೇರಿದಂತೆ ಇತರೆ ಅಧಿಕಾರಿಗಳು, ಜಿಲ್ಲೆಯ ನಾಗರಿಕರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

16ನೇ ರಾಷ್ಟ್ರೀಯ ಮತದಾರರ ದಿನಾಚರಣೆ

ಮತದಾನ ಕೇವಲ ಹಕ್ಕಲ್ಲ, ಸಂವಿಧಾನಾತ್ಮಕ ಕರ್ತವ್ಯ - ನ್ಯಾ. ಸರಸ್ವತಿ ದೇವಿ



ಕೊಪ್ಪಳ ಜ.25-

ಮತದಾನ ಎಂಬುದು ಕೇವಲ ಹಕ್ಕಲ್ಲ, ಅದು ನಮ್ಮ ಸಂವಿಧಾನಾತ್ಮಕ ಕರ್ತವ್ಯವಾಗಿದೆ ಎಂದು ಕೊಪ್ಪಳದ ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ಸರಸ್ವತಿ ದೇವಿ ಹೇಳಿದರು.

ಅವರು ಭಾನುವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಭಾರತ ಚುನಾವಣಾ ಆಯೋಗ, ಮುಖ್ಯ ಚುನಾವಣಾಧಿಕಾರಿಗಳ ಕಚೇರಿ, ಕರ್ನಾಟಕ ರಾಜ್ಯ, ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯ ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಕೊಪ್ಪಳ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ 16ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪ್ರಜಾಪ್ರಭುತ್ವದ ಶಕ್ತಿ ಕಾನೂನು ಮತ್ತು ಜನರ ವಿಶ್ವಾಸದ ಮೇಲೆ ನಿಂತಿದ್ದು,

ಆ ವಿಶ್ವಾಸವನ್ನು ಉಳಿಸಿಕೊಳ್ಳುವ ಪ್ರಮುಖ ಸಾಧನವೇ ಮತದಾನ ಆಗಿದೆ. ಹಾಗಾಗಿ ದೇಶದ ಪ್ರತಿಯೊಬ್ಬ ಅರ್ಹ ನಾಗರಿಕನು ಮತದಾನ ಹಕ್ಕನ್ನು ಜವಾಬ್ದಾರಿಯಿಂದ ಬಳಸಬೇಕು. ಮತದಾನ ಪ್ರಕ್ರಿಯೆಯು ಪವಿತ್ರವಾಗಿದ್ದು, ಇದು ನಮಗೆ ಸಂವಿಧಾನ ನೀಡಿದ ಅತ್ಯಂತ ಮಹತ್ವದ ಹಕ್ಕಾಗಿದೆ ಎಂದರು. ಮಹಿಳೆಯರು, ಯುವಕರು ಹಾಗೂ ಮೊದಲ ಬಾರಿ ಮತದಾನ ಮಾಡುವ ಮತದಾರರು ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮತದಾನದ ಮೂಲಕವೇ ನ್ಯಾಯ, ಸಮಾನತೆ ಮತ್ತು ಸಂವಿಧಾನಾತ್ಮಕ ಮೌಲ್ಯಗಳನ್ನು ಬಲಪಡಿಸಬಹುದು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಮಾತನಾಡಿ, ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯ ಅಡಿಪಾಯ ಮತದಾನವಾಗಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಂಡು ತಮ್ಮ ಅಮೂಲ್ಯ ಮತದಾನ ಹಕ್ಕನ್ನು ಜವಾಬ್ದಾರಿಯಿಂದ ಬಳಸಬೇಕು. ಮತದಾನವು ನಮ್ಮ ಸಂವಿಧಾನಾತ್ಮಕ ಕರ್ತವ್ಯ ಆಗಿದೆ. ಯುವಕರು ಹಾಗೂ ಮೊದಲ ಬಾರಿ ಮತದಾನ ಮಾಡುವ ಹೊಸ ಮತದಾರರು ಚುನಾವಣೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಬಲಿಷ್ಠ ಮತ್ತು ಪಾರದರ್ಶಕ ಪ್ರಜಾಪ್ರಭುತ್ವ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಕರೆ ನೀಡಿದರು.

ಮತದಾರರ ಪಟ್ಟಿಯ ನಿಖರತೆ, ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಪ್ರಮುಖ ಗುರಿಯಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ಮೂಲಕ ನಿರಂತರವಾಗಿ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದ ಅಂಗವಾಗಿ ಮತದಾರರ ಪ್ರತಿಜ್ಞಾ ವಾಚನವನ್ನು ಕ್ಯಾಪ್ಟನ್ ಮಹೇಶ ಎಸ್ ಮಾಲಗಿತ್ತಿ ಅವರು ಬೋಧನೆ ಮಾಡಿದರು.

ಮತದಾರರ ಜಾಗೃತಿ ಕಾರ್ಯದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಬಿಎಲ್‌ಓ, ಸುಪರವೈಜರ್, ಇ.ಎಲ್.ಸಿ ಸಂಯೋಜಕರು ಹಾಗೂ ಮಕ್ಕಳ ಸಂಸತ್ ಸ್ಪರ್ಧೆಯಲ್ಲಿ ರಾಜ್ಯ ಮಟ್ಟದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಮತ್ತು ಇತರೆ ಸಾಧಕರಿಗೆ ಸನ್ಮಾನಿಸಲಾಯಿತು. ಹೊಸದಾಗಿ ನೋಂದಣಿಯಾದ ಯುವ ಮತದಾರರಿಗೆ ಮತದಾರರ ಗುರುತಿನ ಚೀಟಿಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್ ಎಸ್. ದರಗದ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತಕುಮಾರ್, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ್, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ನಾಗಮಣಿ ಹೊಸಮನಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಆಶಾ ಕಾರ್ಯಕರ್ತರು, ಜಿಲ್ಲಾ ಸ್ವೀಪ್ ಸಮಿತಿಯ ಇತರೆ ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಗಣರಾಜ್ಯೋತ್ಸವ ದೇವದುರ್ಗ ಕನ್ನಡ ಸಾಹಿತ್ಯ ಪರಿಷತ್ತಿನಿಂದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



ದೇವದುರ್ಗ,ಜ.26-

ತಾಲೂಕ ಆಡಳಿತದಿಂದ ಸಾರ್ವಜನಿಕ ಕ್ಲಬ್ ಮೈದಾನ ವೇದಿಕೆಯಲ್ಲಿ ಜರಗಿದ 77ನೇ ಗಣರಾಜ್ಯೋತ್ಸ ವ ಕಾರ್ಯಕ್ರಮದಲ್ಲಿ ದೇವದುರ್ಗ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಕಲವೋತ್ಸ ವದಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿಗೆ ಆಯ್ಕೆಯಾದ ವಿಜೇತ ವಿದ್ಯಾರ್ಥಿಗಳಿಗೆ ದೇವದುರ್ಗ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನಿಂದ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ ಶಾಸಕರಾದ ಕರೆಮ್ಮ ಜಿ. ನಾಯಕ ವಿದ್ಯಾರ್ಥಿಗಳಿಗೆ ಪದಕ ಪುರಸ್ಕಾರವನ್ನು ನೀಡಿ ಗೌರವಿಸಿದರು ವಿದ್ಯಾರ್ಥಿಗಳ ಕಲೆ ಸಾಹಿತ್ಯ ಸಂಗೀತ ಕ್ರೀಡೆ ಕವನವಾಚನ ಚರ್ಚಾ ಸ್ಪರ್ಧೆ ಸಾಮಾನ್ಯ ಜ್ಞಾನ ಕನ್ನಡ ಭಾಷೆ ಜ್ಞಾನ ಆಶುಭಾಷಣ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಅಭಿನಂದಿಸಿ ಮೆಚ್ಚುಗೆ ವ್ಯಕ್ತಪಡಿಸಿದರು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿ ಕ್ರಿಯಾಶೀಲತೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತಾಸಿಲ್ದಾರಾದ ನಾಗಮ್ಮ ಕಟ್ಟಿಮನಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯಾದ ಬಸವರಾಜ್ ಪುರಸಭೆಯ ಮುಖ್ಯ ಅಧಿಕಾರಿ ಕೆ ಹಂಪಯ್ಯ ಕ್ಷೇತ್ರ ಶಿಕ್ಷಣಾಧಿಕಾರಿಯಾದ ಮಲ್ಲಿಕಾರ್ಜುನ್ ಶಿಕ್ಷಣ ಸಮನ್ವಯ ಅಧಿಕಾರಿ ಶಿವರಾಜ್ ಪೂಜಾರಿ ಸಮಾಜ ಕಲ್ಯಾಣ ಅಧಿಕಾರಿ ರಾಜಕುಮಾರ್ ದೋಣಿ ಬನ್ನಪ್ಪ ಹಿರಿಯ ಅಭಿಯಂತರು ಶ್ರೀನಿವಾಸ್ ನಾಯಕ್ ನಿರ್ದೇಶಕರು ದೈಹಿಕ ಶಿಕ್ಷಣ ನಿರ್ದೇಶಕರಾದ ಕೌಡಿಮಠ ಭೀಮರಾಯ ನಾಯಕ್ ಮೇಟಿ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಹನುಮಂತ ರಾಯ ಶಾಖೆ ಎಪಿಎಂಸಿ ಅಧ್ಯಕ್ಷರಾದ ಆದನ್ ಗೌಡ ಪಾಟೀಲ್ ಗ್ಯಾರಂಟಿ ಯೋಜನೆಯ ಸಮಿತಿಯ ಅಧ್ಯಕ್ಷರಾದ ಲಕ್ಷ್ಮಣ ಜ್ಯೋತಿ ಆದಿ ಕಮಲಮ್ಮ ಎಚ್. ಶಿವರಾಜ್ ಅಧ್ಯಕ್ಷರು ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ದೇವದುರ್ಗ ಸೇರಿದಂತೆ ಇತರರು ಉಪಸ್ಥಿತರಿದ್ದರು

ಕಿನ್ನಾಳ ಬಸ್ಟಾಂಡ್‌ನಲ್ಲಿ ಗಣರಾಜ್ಯೋತ್ಸವ ಆಚರಣೆ


ಕೊಪ್ಪಳ,ಜ.26-

ತಾಲೂಕಿನ ಕಿನ್ನಾಳ ಗ್ರಾಮದ ಕೆಕೆಆರ್ಟಿಸಿ ಬಸ್ ನಿಲ್ದಾಣದಲ್ಲಿ 77ನೇ ಗಣರಾಜ್ಯೋತ್ಸ ವದ ದಿನಾಚರಣೆಯ ಅಂಗವಾಗಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಮತ್ತು ಸಂವಿಧಾನ ಶಿಲ್ಪಿ ಡಾ, ಬಿ ಆರ್ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜಿ ಸಲ್ಲಿಸಿ ಪುಷ್ಪ ನಮನ ಸಲ್ಲಿಸಿ ಆಚರಿಸಲಾಯಿತು,

ಕಿನ್ನಾಳ ಬಸ್ ನಿಲ್ದಾಣದ ಸಂಚಾರ ನಿಯಂತ್ರಕರಾದ ಸತ್ಯ ನಾರಾಯಣ ಮುಂಡರಗಿ ರವರು ವಿಶೇಷ ಪೂಜೆ ಸಲ್ಲಿಸಿ ಗಣರಾಜ್ಯೋತ್ಸ ವ ದಿನಾಚರಣೆ ಗೆ ಚಾಲನೆ ನೀಡಿದರು,

ಈ ಸಂದರ್ಭದಲ್ಲಿ ಚಾಲಕ ಮಂಜುನಾಥ್, ನಿರ್ವಾಹಕ ಬಸವರಾಜ್, ಅಭಿಷೇಕ್ ಮತ್ತು ಮನೋಜ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು

ಮಠಗಳು ಸಂಸ್ಕಾರ ಕೊಡುವ ಜ್ಞಾನ ಕೇಂದ್ರಗಳು



ಜೇವರ್ಗಿ,ಜ.26-

ಮನುಷ್ಯ ಯಾವಾಗಲೂ ಸುಖವನ್ನೇ ಬಯಸುತ್ತಾನೆ. ಸುಖ ಮತ್ತು ಶಾಂತಿಗೆ ಧರ್ಮ ಪರಿಪಾಲನೆ ಬಹಳ ಮುಖ್ಯ. ವೀರಶೈವ ಧರ್ಮದಲ್ಲಿ ಸಂಸ್ಕಾರಕ್ಕೆ ಬಹಳಷ್ಟು ಪ್ರಾಮುಖ್ಯತೆ ಕೊಟ್ಟಿದ್ದಾರೆ. ಈ ನಾಡಿನ ಮಠಗಳು ಭಕ್ತರಿಗೆ ಸಂಸ್ಕಾರ ಕೊಡುವ ಜ್ಞಾನ ಕೇಂದ್ರಗಳಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಮಾಗಣಗೆರೆ ಶ್ರೀ ರುದ್ರಮುನೀಶ್ವರ ಹಿರೇಮಠದ ಶ್ರೀ ಗುರು ಪಟ್ಟಾಧಿಕಾರದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಾರತೀಯ ಸಂಸ್ಕೃತಿಯಲ್ಲಿ ಧರ್ಮ ಪರಂಪರೆ ಮತ್ತು ಆದರ್ಶಗಳಿಗೆ ಬಹಳಷ್ಟು ಮಹತ್ವವಿದೆ. ವೀರಶೈವ ಧರ್ಮ ಸಂವಿಧಾನದಲ್ಲಿ ಅಷ್ಟಾವರಣ, ಪಂಚಾಚಾರ ಮತ್ತು ಷಟ್ಸ್ಥಲಗಳು ಆತ್ಮ ವಿಶ್ವಾಸ ಮತ್ತು ಶ್ರೇಯೋಭಿವೃದ್ಧಿಗೆ ಇವುಗಳ ಅರಿವು ಆಚರಣೆ ಬಹಳ ಮುಖ್ಯ. ಶ್ರೀ ಜಗದ್ಗುರು ರೇಣುಕಾಚಾರ್ಯರು ಧಾರ್ಮಿಕ ಮೌಲ್ಯಗಳ ಪರಿಪಾಲನೆ ಮತ್ತು ಸಂರಕ್ಷಣೆಯಿಂದ ಮಾನವನ ವ್ಯಕ್ತಿತ್ವಕ್ಕೆ ಬೆಲೆ ನೆಲೆ ಪ್ರಾಪ್ತವಾಗುವುದೆಂದು ಬೋಧಿಸಿದ್ದಾರೆ. ನೂರಾ ಮೂವತ್ತು ವರ್ಷದಿಂದ ನಿಂತು ಹೋಗಿದ್ದ ಮಾಗಣಗೆರೆ ಶ್ರೀ ರುದ್ರಮುನೀಶ್ವರ ಹಿರೇಮಠಕ್ಕೆ ದಾನಯ್ಯ ದೇವರನ್ನು ನಿಯುಕ್ತಿಗೊಳಿಸಿ ಸಕಲ ಸದ್ಭಕ್ತರ ಸಮ್ಮುಖದಲ್ಲಿ ಪಟ್ಟಾಧಿಕಾರ ನೆರವೇರಿಸಿ ಶ್ರೀ ಷ॥ಬ್ರ॥ ಏಕಾಕ್ಷರ ಶಿವಾಚಾರ್ಯ ಸ್ವಾಮಿಗಳು ಎಂಬ ನೂತನ ಅಭಿದಾನದಿಂದ ದಂಡ ಕಮಂಡಲ ಸಮೇತ ಪಂಚ ಮುದ್ರಾ ಅನುಗ್ರಹಿಸಿ ಆಶೀರ್ವದಿಸಲಾಗಿದೆ. ವಯೋವೃದ್ಧರಾದ ಹುಡುಗಿ ಹಿರೇಮಠದ ವಿರೂಪಾಕ್ಷ ಶಿವಾಚಾರ್ಯ ಸ್ವಾಮಿಗಳು ನೂತನ ಶ್ರೀಗಳವರಿಗೆ ಧಾರ್ಮಿಕ ಸಂಸ್ಕಾರ ನೀಡಿ ಷಟ್ಸ್ಥಲ ಬ್ರಹ್ಮೋಪದೇಶ ಅನುಗ್ರಹಿಸಿ ಶುಭ ಹಾರೈಸಿದ್ದಾರೆ. ನೂತನ ಶ್ರೀಗಳವರು ಶ್ರೀ ಮಠದ ಅಭಿವೃದ್ಧಿ ಮತ್ತು ಭಕ್ತರಿಗೆ ಯೋಗ್ಯ ಮಾರ್ಗದರ್ಶನ ನೀಡುವರೆಂಬ ಆತ್ಮ ವಿಶ್ವಾಸ ತಮಗಿದೆ ಎಂದು ರೇಶ್ಮೆ ಮಡಿ ಸ್ಮರಣಿಕೆ ಫಲ ಪುಷ್ಪವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಮ್ಮ ಆಶೀರ್ವಚನದಲ್ಲಿ ವೀರಶೈವ ಧರ್ಮ ಅತ್ಯಂತ ಪ್ರಾಚೀನವಾದ ಧರ್ಮವಾಗಿದೆ. ಇದರ ಇತಿಹಾಸ ಪರಂಪರೆ ಬಹಳಷ್ಟು ದೊಡ್ಡದು. ಜೀವ ಶಿವನಾಗಲು ಅಂಗ ಲಿಂಗವಾಗಲು, ನರ ಹರನಾಗಲು, ಭವಿ ಭಕ್ತನಾಗುವ ಸಾಧನಾ ಮಾರ್ಗವನ್ನು ಈ ಧರ್ಮದ ಸಂವಿಧಾನದಿಂದ ಅರಿಯಲು ಸಾಧ್ಯವಿದೆ. ಮಾಗಣಗೆರೆ ಶ್ರೀ ರುದ್ರಮುನೀಶ್ವರ ಹಿರೇಮಠದ ಗುರುತ್ವಾಧಿಕಾರ ಸ್ವೀಕರಿಸಿದ ಏಕಾಕ್ಷರ ಶಿವಾಚಾರ್ಯ ಸ್ವಾಮಿಗಳು ಆ ಉನ್ನತ ದಾರಿಯಲ್ಲಿ ಮುನ್ನಡೆದು ಧರ್ಮ ಸಂಸ್ಕೃತಿಯ ಸಂವರ್ಧನೆಗೆ ಶ್ರಮಿಸುವರೆಂಬ ಆತ್ಮ ವಿಶ್ವಾಸ ತಮಗಿದೆ ಎಂದರು.

ಮಾಗಣಗೆರೆ ಬೃಹನ್ಮಠದ ಡಾ॥ ವಿಶ್ವಾರಾಧ್ಯ ಶಿವಾಚಾರ್ಯ ಸ್ವಾಮಿಗಳು, ಆಲೂರು ಹಿರೇಮಠದ ಕೆಂಚವೃಷಭೇಂದ್ರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಮಾತನಾಡಿದರು. ಈ ಪವಿತ್ರ ಸಮಾರಂಭದಲ್ಲಿ ಬಡದಾಳ, ಸಿದ್ಧರಬೆಟ್ಟ, ನಾಗಣಸೂರು, ಕಾರಭೋಸಗಾ, ಶಖಾಪುರ, ಕಡಕೋಳ, ಆಲಮೇಲ, ಐನಾಪುರ, ಯಂಕಂಚಿ, ಕೊಣ್ಣೂರು ಶ್ರೀಗಳವರು ಉಪಸ್ಥಿತರಿದ್ದರು.

ಈ ಧರ್ಮ ಸಮಾರಂಭ ಉದ್ಘಾಟಿಸಿದ ರಾಜ್ಯ ವೈದ್ಯಕೀಯ ಸಚಿವ ಶರಣಪ್ರಕಾಶ ಪಾಟೀಲ ಮಾತನಾಡಿ ಭಾರತ ಪುಣ್ಯ ನಾಡಿನಲ್ಲಿ ಹಲವಾರು ಪೀಠ ಮಠಗಳು ಮತ್ತು ಧಾರ್ಮಿಕ ಕೇಂದ್ರಗಳು ಆಧ್ಯಾತ್ಮ ಜ್ಞಾನವನ್ನು ಅರುಹುತ್ತಾ ಬಂದಿವೆ. ಶಿವಪಥವನರಿಯಲು ಗುರು ಮಾರ್ಗದರ್ಶನ ಮುಖ್ಯ. ಮಾಗಣಗೆರೆ ಶ್ರೀ ರುದ್ರಮುನೀಶ್ವರ ಹಿರೇಮಠಕ್ಕೆ ನೂತನ ಶ್ರೀಗಳವರು ಆಗಮಿಸಿರುವುದು ಈ ಭಾಗದ ಭಕ್ತರಿಗೆ ಬಹಳಷ್ಟು ಸಂತೋಷವಾಗಿದೆ ಎಂದರು. ಜೇವರ್ಗಿ ಕ್ಷೇತ್ರದ ಶಾಸಕ ಮತ್ತು ಕೆ.ಕೆ.ಆರ್. ಡಿ.ಬಿ.ಅಧ್ಯಕ್ಷ ಡಾ॥ ಅಜಯಸಿಂಗ್ ಇಂಡಿ ಕ್ಷೇತ್ರದ ಶಾಸಕ ಯಶವಂತರಾಯಗೌಡ ಪಾಟೀಲ್, ಜೇವರ್ಗಿ ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ್, ಶಿವರಾಜ್ ಪಾಟೀಲ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಗುರುರಕ್ಷೆ ಸ್ವೀಕರಿಸಿದರು. ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

ಪಟ್ಟಾಭಿಷಿಕ್ತರಾದ ನೂತನ ಪಟ್ಟಾಧ್ಯಕ್ಷ ಏಕಾಕ್ಷರ ಶಿವಾಚಾರ್ಯ ಸ್ವಾಮಿಗಳು ತಮ್ಮ ಮೊದಲ ಧರ್ಮ ಸಂದೇಶ ನೀಡಿ ವೀರಶೈವ ಧರ್ಮ ಪರಂಪರೆಯಲ್ಲಿ ಶ್ರೀ ಗುರುವಿಗೆ ಪ್ರಥಮ ಸ್ಥಾನವಿದೆ. ಯೋಗ್ಯ ಗುರುವಿನಿಂದ ಭಕ್ತರ ಕಲ್ಯಾಣ ಸಾಧ್ಯ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಬಲದಿಂದ ಶ್ರೀ ಮಠದ ಭಕ್ತರಿಗೆ ಮಾರ್ಗದರ್ಶನ ಮಾಡುವ ಕಾರ್ಯ ಮಾಡುತ್ತೇನೆಂದು ಸಂಕಲ್ಪ ಕೈಕೊಂಡು ಶಿಷ್ಯ ಭಕ್ತರ ಸಂಪ್ರೀತಿಗೆ ಪಾತ್ರರಾದರು. ಸಿದ್ದಣ್ಣ ವನಿಕ್ಯಾಲ ಸ್ವಾಗತಿಸಿದರು. ಜೇರಟಗಿ ಮಡಿವಾಳ ಶಾಸ್ತ್ರಿಗಳು ನಿರೂಪಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಬೋರ್ಡ್ ಆಫ್ ಪೀಸ್'ಗೆ ಸೇರದ ಭಾರತದ ನಿಲುವು ಸ್ವಾಗತಾರ್ಹ



ಗಾಜಾ ಅಭಿವೃದ್ಧಿ ನೆಪದಲ್ಲಿ ಗಾಜಾವನ್ನು ಕಬಳಿಸಲು ಟ್ರಂಪ್ ನೇತೃತ್ವದಲ್ಲಿ 'ಬೋರ್ಡ್ ಆಫ್ ಪೀಸ್' ರಚನೆಯಾಗಿದೆ. ಆದರೆ, ಗಾಜಾ ಮೇಲಿನ ಇಸ್ರೇಲ್ ಕ್ರೌರ್ಯವನ್ನು ಮೋದಿ ನೇತೃತ್ವದ ಭಾರತ ಈವರೆಗೆ ಖಂಡಿಸಿಲ್ಲ. ಹಾಗೆಯೇ ಕುತಂತ್ರದಿಂದ ಕೂಡಿದ 'ಶಾಂತಿ ಮಂಡಳಿ'ಗೆ ಸೇರಲು ಕೂಡ ಭಾರತ ಆಸಕ್ತಿ ತೋರಿಸಿಲ್ಲ.

ದಶಕಗಳಿಂದಲೂ ಉದ್ವಿಗ್ನತೆಯಲ್ಲೇ ಇರುವ ಇಸ್ರೇಲ್-ಪ್ಯಾಲೆಸ್ತೀನ್ ಸಂಘರ್ಷವು ಮಾರಣಹೋಮಕ್ಕೆ ತಿರುಗಿದೆ. ಕಳೆದ ಮೂರು ವರ್ಷಗಳಿಂದ ಪ್ಯಾಲೆಸ್ತೀನ್‌ನಲ್ಲಿ ಇಸ್ರೇಲ್ ನರಮೇಧ ನಡೆಸುತ್ತಿದೆ. 2023ರ ಅಕ್ಟೋಬರ್‌ನಿಂದ ಈವರೆಗೆ 73 ಸಾವಿರಕ್ಕೂ ಹೆಚ್ಚು ಪ್ಯಾಲೆಸ್ತೀನಿಯರನ್ನು ಇಸ್ರೇಲ್ ಕೊಂದಿದೆ. ರಕ್ತಪಾತ ನಡೆಸಿ, ಗಹಗಹಿಸಿ ನಗುತ್ತಿದೆ. ಇಸ್ರೇಲ್ ಕ್ರೌರ್ಯಕ್ಕೆ ಅಮೆರಿಕ ಕುಮ್ಮಕ್ಕು ನೀಡುತ್ತಿರುವುದು ಗೌಪ್ಯವಾಗೇನೂ ಉಳಿದಿಲ್ಲ. ಆದರೂ, ಅಮೆರಿಕ ಶಾಂತಿಯ ನಾಟಕವಾಡುತ್ತಿದೆ. ಅಮೆರಿಕ ಅಧ್ಯಕ್ಷ ಟ್ರಂಪ್ ನೇತೃತ್ವದಲ್ಲಿ ಬೋರ್ಡ್ ಆಫ್ ಪೀಸ್ (ಶಾಂತಿ ಮಂಡಳಿ) ರಚನೆಯಾಗಿದೆ. ಆದರೆ, ಇದೂ ಕೂಡ ಬಹಿರಂಗ ಪಕ್ಷಪಾತಿಯಾಗಿ ವರ್ತಿಸುತ್ತಿದೆ.

ಈ ಶಾಂತಿ ಮಂಡಳಿಯು ಪ್ಯಾಲೆಸ್ತೀನ್‌ನ ಗಾಜಾ ಪಟ್ಟಿಯಲ್ಲಿ ಶಾಂತಿ ನೆಲೆಸುವುದು, ಮೂಲಸೌಕರ್ಯಗಳನ್ನು ಪುನರ್ನಿರ್ಮಾಣ ಮಾಡುವುದು, ಇಸ್ರೇಲ್-ಹಮಾಸ್ ಕದನ ವಿರಾಮವನ್ನು ಗಟ್ಟಿಗೊಳಿಸುವುದು ಹಾಗೂ ಪ್ಯಾಲೆಸ್ತೀನ್ ಪ್ರದೇಶದಲ್ಲಿ ತಾತ್ಕಾಲಿಕ ಸರ್ಕಾರವನ್ನು ರಚಿಸುವ ಉದ್ದೇಶವನ್ನು ಹೊಂದಿದೆ. ಟ್ರಂಪ್ ಅವರ ಶಾಂತಿ ಮಂಡಳಿ ಎಷ್ಟು ಪಕ್ಷಪಾತಿಯೆಂದರೆ, ಮಂಡಳಿಯಲ್ಲಿ ಹಂತಕ, ಕ್ರೂರಿ ಇಸ್ರೇಲ್‌ಅನ್ನೂ ಒಳಗೊಳ್ಳಲಾಗಿದೆ. ಆದರೆ, ಬಲಿಪಶು ಪ್ಯಾಲೆಸ್ತೀನ್‌ಅನ್ನು ಹೊರಗಿಡಲಾಗಿದೆ. ಆದ್ದರಿಂದ, ಮಂಡಳಿಯ ಉದ್ದೇಶವು ಶಾಂತಿ ನೆಲೆಸುವುದಲ್ಲ, ಗಾಜಾವನ್ನು ಅಮೆರಿಕ ವಶಕ್ಕೆ ಪಡೆದು, ಅಲ್ಲಿ ರಿಯಲ್ ಎಸ್ಟೇಟ್ ಉದ್ಯಮವನ್ನು ಬೆಳೆಸುವುದು ಎಂದೇ ವಿಶ್ಲೇಷಿಸಲಾಗಿದೆ.

ಅಂದಹಾಗೆ, ಕಳೆದ ವರ್ಷ (2025 ಜನವರಿ) 2ನೇ ಬಾರಿಗೆ ಅಧ್ಯಕ್ಷರಾದ ಟ್ರಂಪ್, ತಾವು ಅಧಿಕಾರಕ್ಕೆ ಬರುವುದಕ್ಕೂ ಮುನ್ನ ಸಂಘರ್ಷ ನಿಲ್ಲಬೇಕೆಂದು ತಾಕೀತು ಮಾಡಿದ್ದರು. ಅದರಂತೆ, ಇಸ್ರೇಲ್ ತನ್ನ ಆಕ್ರಮಣವನ್ನು ನಿಲ್ಲಿಸಿದರೂ, ಕದನ ವಿರಾಮ ಹೆಚ್ಚು ದಿನ ಉಳಿಯಲಿಲ್ಲ. ಸಂಘರ್ಷ ಮತ್ತೆ ಸ್ಫೋಟಿಸಿತು. ಗಾಜಾ ಮೇಲೆ ಇಸ್ರೇಲ್ ಭೀಕರ ದಾಳಿ ಮಾಡಿತು. ವಿದೇಶಗಳಿಂದ ಹರಿದುಬರುತ್ತಿದ್ದ ನೆರವು ಗಾಜಾ ತಲುಪದಂತೆ ನಿರ್ಬಂಧ ಹೇರಿತು. ನೆರವು ಹೊತ್ತು ಗಾಜಾ ಎಡೆಗೆ ಹೊರಟವರನ್ನು ಬಂಧಿಸಿತು. ಇಸ್ರೇಲ್ ಕ್ರೌರ್ಯ ಪರಾಕಾಷ್ಠೆ ತಲುಪಿತು.

ಈ ಸಂದರ್ಭವನ್ನು ತನ್ನ ಸ್ವಾರ್ಥಕ್ಕೆ ಬಳಸಿಕೊಂಡ ಟ್ರಂಪ್, ಶಾಂತಿ ಮಾತುಕತೆಯ ನೆಪದಲ್ಲಿ ಮಧ್ಯಪ್ರವೇಶಿಸಿದರು. ಗಾಜಾದಲ್ಲಿ ಶಾಂತಿ ನೆಲೆಸಿ, ಮೂಲಸೌಕರ್ಯಗಳ ಮರುಸ್ಥಾಪನೆ ಮಾಡುತ್ತೇವೆ. ಅಮೆರಿಕವು ಗಾಜಾವನ್ನು ತನ್ನ ಬತ್ತಳಿಕೆಗೆ ತೆಗೆದುಕೊಂಡು ಪ್ರವಾಸೋದ್ಯಮವನ್ನು ಅಭಿವೃದ್ಧಿ ಮಾಡುತ್ತದೆ ಎಂದು ಟ್ರಂಪ್ ಘೋಷಿಸಿದರು. ಇದು ಅಕ್ಷರಶಃ, ಈಗ ಗ್ರೀನ್‌ಲ್ಯಾಂಡ್‌ಅನ್ನು ತಮ್ಮ ಅಧೀನಕ್ಕೆ ತೆಗೆದುಕೊಳ್ಳಲು ಯತ್ನಿಸುತ್ತಿರುವ ರೀತಿಯ, ಹುನ್ನಾರವೇ ಆಗಿತ್ತು. ಪ್ಯಾಲೆಸ್ತೀನಿಯರನ್ನು ಗಾಜಾದಿಂದ ಓಡಿಸಿ ಅಥವಾ ತಮ್ಮ ಕೂಲಿಯಾಳುಗಳನ್ನಾಗಿ ಮಾಡಿ ದುಡಿಸಿಕೊಂಡು ಇಡೀ ಗಾಜಾವನ್ನು ರಿಯಲ್ ಎಸ್ಟೇಟ್ ಉದ್ಯಮವಾಗಿ ಪರಿವರ್ತಿಸುವುದು ಟ್ರಂಪ್/ಅಮೆರಿಕದ ಕುತಂತ್ರವಾಗಿತ್ತು.


ಟ್ರಂಪ್ ಕುತಂತ್ರ ಈಗ ಮತ್ತೊಂದು ಹಂತಕ್ಕೆ ತಲುಪಿದೆ. 2026ರ ಜನವರಿಯಲ್ಲಿ ಡಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ಸಮಾವೇಶದಲ್ಲಿ ಟ್ರಂಪ್ ಶಾಂತಿ ಮಂಡಳಿಯನ್ನು ಅಧಿಕೃತವಾಗಿ ಘೋಷಿಸಿದ್ದಾರೆ. ಇದನ್ನು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯೂ ಅನುಮೋದಿಸಿದೆ. ಶಾಂತಿ ಮಂಡಳಿಯಲ್ಲಿ ಸದಸ್ಯತ್ವ ಪಡೆಯಲು ನಾನಾ ದೇಶಗಳನ್ನು ಆಹ್ವಾನಿಸಿದೆ. ಮಂಡಳಿಯಲ್ಲಿ ಸ್ಥಾಯಿ ಸದಸ್ಯತ್ವ ಪಡೆಯಲು 1 ಶತಕೋಟಿ ಡಾಲರ್ ಕೊಡಬೇಕೆಂದೂ ಹೇಳಿದೆ. ಮಂಡಳಿಯ ಅಧ್ಯಕ್ಷರಾಗಿ ಟ್ರಂಪ್ ಇದ್ದರೆ, ಕಾರ್ಯದರ್ಶಿಯಾಗಿ ಟ್ರಂಪ್ ಅಳಿಯ, ರಿಯಲ್ ಎಸ್ಟೇಟ್ ಉದ್ಯಮಿ ಜಾರೆಡ್ ಕುಶ್ನರ್ ಇದ್ದಾರೆ. ಜೊತೆಗೆ, ಸ್ಟೀವ್ ವಿಟ್‌ಕಾಫ್ ಮತ್ತು ಮಾರ್ಕ್ ರೋವನ್ ಕೂಡ ಸೇರಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಕೂಡ ಸದಸ್ಯತ್ವ ಪಡೆದಿದ್ದಾರೆ. ಆದರೆ, ಮಂಡಳಿಯು ಹಮಾಸ್‌ಅನ್ನು ಸಂಪೂರ್ಣವಾಗಿ ಹೊರಗಿಟ್ಟಿದೆ.

ಮಂಡಳಿಗೆ ಗಾಜಾದಲ್ಲಿ 25 ಶತಕೋಟಿ ಡಾಲರ್ ಹೂಡಿಕೆ ಮಾಡಿ, ಆಧುನಿಕ ನಗರವನ್ನಾಗಿ ಬದಲಾಯಿಸುವುದು ಆದ್ಯತೆಯ ಗುರಿಯಾಗಿದೆ. ಅಂದರೆ, ಈ ಹೂಡಿಕೆಯು ಗಾಜಾ ಜನರಿಗೆ ನೆರವು ನೀಡುವುದು, ಅವರ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವುದಲ್ಲ. ಬದಲಾಗಿ, ಗಾಜಾವನ್ನು ಪ್ರವಾಸಿ ತಾಣವಾಗಿ ಮಾರ್ಪಡಿಸಿ, ಅದರ ಮೇಲೆ ಸಂಪೂರ್ಣ ನಿಯಂತ್ರಣ ಸಾಧಿಸುವುದು, ಗಾಜಾಗೆ ಪ್ರವಾಸಿಗರ ಹರಿವನ್ನು ಹೆಚ್ಚಿಸಿ, ಹಣವನ್ನು ದೋಚುವುದು.

ಈ ಯೋಜನೆಯ ಮಾಸ್ಟರ್ ಮೈಂಡ್ ಟ್ರಂಪ್ ಅವರ ಅಳಿಯ ಕುಶ್ನರ್ ಆಗಿದ್ದಾರೆ. ಅವರು ಗಾಜಾವನ್ನು ವಾಟರ್‌ಫ್ರಂಟ್ ಪ್ರಾಪರ್ಟಿ ಎಂದು ಕರೆದಿದ್ದಾರೆ. ಇದನ್ನು ಶುಚಿಗೊಳಿಸಿ, ಅಭಿವೃದ್ಧಿಪಡಿಸಬೇಕೆಂದು ಹೇಳಿದ್ದಾರೆ. ಅವರ ಯೋಜನೆಯಂತೆ ಗಾಜಾ ಪಟ್ಟಿಯನ್ನು ರಫಾ, ಖಾನ್ ಯೂನಿಸ್, ಸೆಂಟರ್ ಕ್ಯಾಂಪ್ಸ್ ಹಾಗೂ ಗಾಜಾ ಸಿಟಿ ಎಂಬ ನಾಲ್ಕು ಭಾಗಗಳನ್ನಾಗಿ ವಿಂಗಡಿಸುವುದು, ಆಧುನಿಕ ಮನೆಗಳು, ಶಿಕ್ಷಣ ಕೇಂದ್ರಗಳು, ಸಾಂಸ್ಕೃತಿಕ ಸ್ಥಳಗಳು, ಆಸ್ಪತ್ರೆಗಳು, ಐಷಾರಾಮಿ ಹೋಟೆಲ್‌ಗಳು, ಲಕ್ಷುರಿ ವಿಲ್ಲಾಗಳು, ಉದ್ಯಾನಗಳು, ಕೈಗಾರಿಕಾ ಕಾಂಪ್ಲೆಕ್ಸ್ ಗಳು ಹಾಗೂ ಡೇಟಾ ಸೆಂಟರ್‌ಗಳನ್ನು ನಿರ್ಮಿಸುವುದು ಸೇರಿದೆ. ಜೊತೆಗೆ, ಗಾಜಾ ಕರಾವಳಿ ಪ್ರದೇಶವನ್ನು ರಿವಿಯೆರಾ ಆಫ್ ದಿ ಮಿಡಲ್ ಈಸ್ಟ್ ಎಂದು ಕರೆದು, ಇಡೀ ನಗರವನ್ನು ಪ್ರವಾಸಿತಾಣವಾಗಿ ಬದಲಿಸಲಿದೆ. ಈ ಯೋಜನೆಯು ಇಸ್ರೇಲ್ ಕ್ರೌರ್ಯಕ್ಕೆ ಬಲಿಯಾದ ಸಾವಿರಾರು ಪ್ಯಾಲೆಸ್ತೀನಿಯರ ಸಮಾಧಿಗಳ ಮೇಲೆ ಕಟ್ಟುತ್ತಿರುವ ರಿಯಲ್ ಎಸ್ಟೇಟ್ ಆಗಿದೆ.

ಟ್ರಂಪ್ ನೇತೃತ್ವದ ಶಾಂತಿ ಮಂಡಳಿ ಮತ್ತು ಅದರ ಯೋಜನೆಯನ್ನು ಅನ್ಯಾಯದ ಬಾವಿ ಎಂದು ರಾಜಕೀಯ ವಿಶ್ಲೇಷಕರು ಹೇಳುತ್ತಾರೆ. ಇಸ್ರೇಲ್‌ನಂತಹ ಕ್ರೂರಿ ರಾಷ್ಟ್ರಕ್ಕೆ ಮಂಡಳಿಯಲ್ಲಿ ಸ್ಥಾನ ನೀಡಿ, ಪ್ಯಾಲೆಸ್ತೀನ್ ಮತ್ತು ಹಮಾಸ್‌ನ್ನು ಹೊರಗಿಟ್ಟಿರುವುದು ಏಕಪಕ್ಷೀಯ ಧೋರಣೆ ಎಂದು ಟೀಕಿಸಿದ್ದಾರೆ. ಗಾಜಾದಲ್ಲಿ ಜನಾಂಗೀಯ ಹತ್ಯೆಗೈದ ಇಸ್ರೇಲ್‌ಅನ್ನು ಸೇರಿಸಿಕೊಂಡು ಇಡೀ ಗಾಜಾವನ್ನೇ ತಮ್ಮ ತೆಕ್ಕೆಗೆ ತೆಗೆದುಕೊಳ್ಳುವ ಅಮೆರಿಕದ ನಿಲುವು ಕೊಳಕು ಸ್ವಾರ್ಥದಿಂದ ಕೂಡಿದೆ ಎಂದು ಬಣ್ಣಿಸಿದ್ದಾರೆ.

ಸದ್ಯಕ್ಕೆ, ಟ್ರಂಪ್ ಕುತಂತ್ರದಿಂದ ರಚನೆಯಾಗಿರುವ ಬೋರ್ಡ್ ಆಫ್ ಪೀಸ್ ಸೇರಲು ಭಾರತವು ಆಸಕ್ತಿ ತೋರಿಸಿಲ್ಲ. ಗಾಜಾ ಮೇಲಿನ ಇಸ್ರೇಲ್ ಕ್ರೌರ್ಯವನ್ನು ಮೋದಿ ನೇತೃತ್ವದ ಭಾರತ ಈವರೆಗೆ ಖಂಡಿಸಿಲ್ಲ. ಇಸ್ರೇಲ್ ಪರವಾರ ಧೋರಣೆ, ವ್ಯಾಪಾರ ಸಂಬಂಧ ಹಾಗೂ ಟ್ರಂಪ್ ಮೇಲಿನ ಭಯದಿಂದ ಇಸ್ರೇಲ್ ಕ್ರೌರ್ಯವನ್ನು ಮೋದಿ ಸರ್ಕಾರ ವಿರೋಧಿಸಿಲ್ಲವೆಂದು ಆರೋಪಿಸಲಾಗಿದೆ. ಆದರೂ, ಗಾಜಾಗೆ ಅಗತ್ಯ ವೈದ್ಯಕೀಯ ಮತ್ತು ಮೂಲಸೌಕರ್ಯದ ನೆರವನ್ನು ನೀಡಿದೆ. ಕದನ ವಿರಾಮಕ್ಕಾಗಿ ಕರೆ ಕೊಟ್ಟಿದೆ. ಯುಎನ್‌ಆರ್‌ಡಬ್ಲ್ಯೂಎಗೆ ವಾರ್ಷಿಕ 50 ಲಕ್ಷ ಡಾಲರ್ ಸಹಾಯಾಸ್ತ ಚಾಚಿದೆ. ಜೊತೆಗೆ, ಈಗ ಟ್ರಂಪ್ ನೇತೃತ್ವದ ಅನ್ಯಾಯ, ಕುತಂತ್ರ, ಸ್ವಾರ್ಥದಿಂದ ಕೂಡಿರುವ ಶಾಂತಿ ಮಂಡಳಿಗೆ ಸೇರಲು ಭಾರತ ಆಸಕ್ತಿ ತೋರಿಸದೆ ಮೌನವಾಗಿದೆ. ಇಂದಿನ ಪರಿಸ್ಥಿತಿಗೆ ಭಾರತದ ನಿಲುವು ಸ್ವಾಗತಾರ್ಹ.



ಅತ್ತನೂರು ಶಾಲೆಯಲ್ಲಿ ಗಣರಾಜ್ಯೋತ್ಸವ

ಸಿರವಾರ ತಾಲೂಕಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಜನತಾ ಕಾಲೋನಿ ಅತ್ತನೂರು ಶಾಲೆಯಲ್ಲಿ 77ನೇ ಗಣರಾಜ್ಯೋತ್ಸವ ದಿನಾಚರಣೆಯನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಇದೇ ಸಂದರ್ಭದಲ್ಲಿ ಶ್ರೀ ಕಿಫಾಯತ್ ಪಟೇಲ್ ಇಡಪನೂರು, ಇವರು ಸುಮಾರು ಆರು ಸಾವಿರ ರೂಪಾಯಿಯ ಮೈಕ್ ಸೆಟ್ ಅನ್ನು ಶಾಲೆಗೆ ದೇಣಿಗೆ ರೂಪದಲ್ಲಿ ನೀಡಿದರು. ಆದ್ದರಿಂದ ಅವರಿಗೆ ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ಶ್ರೀ ಬಸ್ಸಪ್ಪ, ಉಪಾಧ್ಯಕ್ಷರಾದ ಶ್ರೀಮತಿ ಅನ್ನಪೂರ್ಣ, ಗ್ರಾಮ ಪಂಚಾಯತ್ ಸದಸ್ಯರಾದ ಶ್ರೀ ಅಂಬರೇಶ, ಸರ್ವ ಸದಸ್ಯರು, ಮುಖಂಡರಾದ ಶ್ರೀ ಶೇಖರಪ್ಪ, ಮುಖ್ಯಗುರುಗಳಾದ ಶ್ರೀ ಎಮ್.ಡಿ ಜಾವೀದ್, ಅತಿಥಿ ಶಿಕ್ಷಕಿಯರಾದ ಶ್ರೀಮತಿ ಹಂಪಮ್ಮ, ಕು.ರೇಣುಕಾ, ಅಡುಗೆ ಸಿಬ್ಬಂದಿ, ಗ್ರಾಮದ ಗಣ್ಯವ್ಯಕ್ತಿಗಳು, ಶಿಕ್ಷಣ ಪ್ರೇಮಿಗಳು ಹಾಗು ಶಾಲೆಯ ಮುದ್ದುಮಕ್ಕಳು ಈ ಸಂಧರ್ಭದಲ್ಲಿ ಅವರಿಗೆ ತುಂಬು ಹೃದಯದ ಧನ್ಯವಾದಗಳನ್ನು ತಿಳಿಸಿದರು.

ಸಂವಿಧಾನ ನಿರ್ಮಾತೃಗಳ ಕನಸಿಗೆ ಕುಂದುಂಟಾಗದಂತೆ ಒಕ್ಕೂಟ ವ್ಯವಸ್ಥೆ ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರದ್ದು: ರಾಜ್ಯಪಾಲ ಗೆಹ್ಲೋಟ್

ಬೆಂಗಳೂರು: ಸಂವಿಧಾನದ ನಿರ್ಮಾತೃಗಳ ಸಶಕ್ತ ರಾಜ್ಯಗಳ ಮೂಲಕ ಸಶಕ್ತ ಭಾರತ ನಿರ್ಮಿಸುವ ಅವರ ಕನಸಿಗೆ ಕುಂದುಂಟಾಗದಂತೆ ನಮ್ಮ ಒಕ್ಕೂಟ ವ್ಯವಸ್ಥೆಯನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಮ್ಮ ಗಣರಾಜ್ಯೋತ್ಸವ ಭಾಷಣದಲ್ಲಿ ತಿಳಿಸಿದರು.

ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದದಲ್ಲಿ 77ನೇ ಗಣರಾಜ್ಯೋತ್ಸವ ಪ್ರಯುಕ್ತ ಧ್ವಜಾರೋಹಣ ನೆರವೇರಿಸಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ರಾಜ್ಯದ ಜನರನ್ನು ಉದ್ದೇಶಿಸಿ ಭಾಷಣ ಮಾಡಿದರು. ಜಂಟಿ ಅಧಿವೇಶನ ಭಾಷಣದ ಸಂಘರ್ಷದ ಮಧ್ಯೆ ಗಣರಾಜ್ಯೋತ್ಸವ ದಿನದಂದು ರಾಜ್ಯಪಾಲರ ನಡೆ ಏನಿರಲಿದೆ ಎಂಬ ಕುತೂಹಲ ಮೂಡಿಸಿತ್ತು. ಆದರೆ, ರಾಜ್ಯ ಸರ್ಕಾರ ಸಿದ್ಧಪಡಿಸಿದ ಭಾಷಣವನ್ನೇ ರಾಜ್ಯಪಾಲರು ಯಥಾವತ್ ಆಗಿ ಓದಿದರು. ರಾಜ್ಯಪಾಲರು, ಸರ್ಕಾರದ ಭಾಷಣ ಓದುತ್ತಾರೋ ಇಲ್ಲವೋ ಎಂಬ ಕುತೂಹಲ ಇತ್ತು. ಭಾಷಣದಲ್ಲಿ ಸರ್ಕಾರದ ಸಾಧನೆಗಳು, ಯೋಜನೆಗಳು, ನೀತಿಗಳ ಬಗ್ಗೆ ಉಲ್ಲೇಖಿಸಲಾಗಿದ್ದು, ಕೇಂದ್ರ ಸರ್ಕಾರವನ್ನು ಟೀಕಿಸುವ ಅಂಶಗಳು ಇರಲಿಲ್ಲ. ರಾಜ್ಯಪಾಲರು ತಮ್ಮ ಭಾಷಣದಲ್ಲಿ ರಾಜ್ಯ ಸರ್ಕಾರದ ಯೋಜನೆಗಳು, ಪಂಚ ಗ್ಯಾರಂಟಿ ಯೋಜನೆ, ಸಾಧನೆಗಳ ಬಗ್ಗೆ ವಿವರಿಸಿದರು.

ನಾವು ಸಂವಿಧಾನ ರಕ್ಷಿಸಿದರೆ ಅದು ನಮ್ಮನ್ನು ರಕ್ಷಿಸುತ್ತದೆ: ಸಂವಿಧಾನವು ತನ್ನ ಮೊದಲ ಅನುಚ್ಛೇದದಲ್ಲಿಯೇ ಭಾರತವನ್ನು ಒಂದು ರಾಜ್ಯಗಳ ಒಕ್ಕೂಟ ಎಂದು ಘೋಷಿಸುತ್ತದೆ. ನಮ್ಮ ಸಂವಿಧಾನವು ಸಾರ್ವಭೌಮ ಅಧಿಕಾರವನ್ನು ಒಕ್ಕೂಟ ಮತ್ತು ರಾಜ್ಯಗಳ ನಡುವೆ ಹಂಚಿದೆ. ದೇಶದ ಅಖಂಡತೆ ಮತ್ತು ಸಮಗ್ರತೆಯ ದೃಷ್ಟಿಯಿಂದ ಒಕ್ಕೂಟ ಸರಕಾರಕ್ಕೆ ಹೆಚ್ಚಿನ ಅಧಿಕಾರ ನೀಡುವಾಗಲೂ ರಾಜ್ಯಗಳ ಅಧಿಕಾರ ವ್ಯಾಪ್ತಿಯನ್ನು ಗುರುತಿಸಿ ಗೌರವಿಸಿದೆ. ಆ ಮೂಲಕ ದೇಶದ ವಿವಿಧತೆಯನ್ನು ಎತ್ತಿ ಹಿಡಿದಿದೆ. ವೈವಿಧ್ಯಮಯವಾದ, ಅಧಿಕಾರ ಹಂಚಿಕೆಯ ಈ ತತ್ವವನ್ನು ಅಳವಡಿಸಿಕೊಂಡು ನಮ್ಮ ಸಂವಿಧಾನದ ನಿರ್ಮಾತೃಗಳು ಈ ಆಡಳಿತ ವ್ಯವಸ್ಥೆಯನ್ನು ನಮಗೆ ನೀಡಿದ್ದಾರೆ. ಸಶಕ್ತ ರಾಜ್ಯಗಳ ಮೂಲಕ ಸಶಕ್ತ ಭಾರತ ನಿರ್ಮಿಸುವುದು ಅವರ ಕನಸಾಗಿತ್ತು. ಆ ಕನಸಿಗೆ ಕುಂದುಂಟಾಗದಂತೆ ನಮ್ಮ ಒಕ್ಕೂಟ ವ್ಯವಸ್ಥೆಯನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.

ಸಂವಿಧಾನದ ಕಾರಣಕ್ಕಾಗಿಯೇ ನಾವು ನೆಮ್ಮದಿಯಿಂದ ಇದ್ದೇವೆ. ದೇಶದ ಅಸಂಖ್ಯಾತ ಜನರು, ನಾವು ಸಂವಿಧಾನವನ್ನು ರಕ್ಷಿಸಿದರೆ ಸಂವಿಧಾನವು ನಮ್ಮನ್ನು ರಕ್ಷಿಸುತ್ತದೆ ಎಂದು ಆಳವಾಗಿ ನಂಬಿರುವುದರಿಂದ ಸಂವಿಧಾನವು ದಿನದಿಂದ ದಿನಕ್ಕೆ ಹೆಚ್ಚು ಪ್ರಸ್ತುತವಾಗುತ್ತಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು, ಸಂವಿಧಾನ ಎಷ್ಟೇ ಒಳ್ಳೆಯದಾಗಿರಲಿ, ಅದನ್ನು ಅನುಷ್ಠಾನಗೊಳಿಸುವ ಜನ ಕೆಟ್ಟವರಾಗಿದ್ದರೆ ಪರಿಣಾಮ ಕೆಟ್ಟದ್ದೇ ಆಗುತ್ತದೆ. ಸಂವಿಧಾನ ಎಷ್ಟೇ ಕೆಟ್ಟದ್ದಾಗಿದ್ದರೂ ಅದನ್ನು ಅನುಷ್ಠಾನಗೊಳಿಸುವವರು ಒಳ್ಳೆಯವರಾಗಿದ್ದರೆ ಅದರ ಪರಿಣಾಮ ಒಳ್ಳೆಯದ್ದೇ ಆಗುತ್ತದೆ. ಸಂವಿಧಾನದ ಕಾರ್ಯನಿರ್ವಹಣೆಯು ಅದರ ಗುಣಲಕ್ಷಣದ ಮೇಲೆ ಸಂಪೂರ್ಣವಾಗಿ ಅವಲಂಬಿತವಾಗಿರುವುದಿಲ್ಲ. ಸಂವಿಧಾನವು ರಾಷ್ಟ್ರದ ಅಂಗಗಳಾದ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ವ್ಯವಸ್ಥೆ ಮುಂತಾದವುಗಳನ್ನು ಮಾತ್ರ ಒದಗಿಸಬಹುದು. ಈ ಅಂಗಗಳ ಕಾರ್ಯಾಚರಣೆಯು ಮೇಲೆ ಪ್ರಭಾವ ಬೀರುವ ಅಂಶಗಳೆಂದರೆ ಆ ದೇಶದ ಪ್ರಜೆಗಳು ಮತ್ತು ಅವರ ಆಶೋತ್ತರಗಳನ್ನು ಈಡೇರಿಸುವುದಕ್ಕೆ ತಮ್ಮ ಸಾಧನವಾಗಿ ಆಯ್ಕೆ ಮಾಡಿಕೊಂಡ ರಾಜಕೀಯ ಪಕ್ಷಗಳು ಎಂದಿದ್ದಾರೆ. ಹಾಗಾಗಿ ಜನರು ಮಾಡಬೇಕಾದ ಅತಿ ಮುಖ್ಯ ಕೆಲಸವೆಂದರೆ ಸಂವಿಧಾನದ ಮೂಲ ಆಶಯವನ್ನು ಅರಿತು ಕೆಲಸ ಮಾಡುವ ಪ್ರತಿನಿಧಿಗಳನ್ನು ಆರಿಸಿ ಕಳುಹಿಸುವುದು ಹಾಗೂ ನಿರಂತರವಾಗಿ ಪ್ರಶ್ನೆ, ಸಂವಾದ ಮಾಡುತ್ತಲೇ ಜನತಂತ್ರ ವ್ಯವಸ್ಥೆಯನ್ನು ಉಳಿಸಿಕೊಳ್ಳುವುದಾಗಿದೆ. ಇದನ್ನೇ ಮಹಾತ್ಮ ಗಾಂಧೀಜಿಯವರು ಸಹ ಹೇಳಿದ್ದಾರೆ ಎಂದು ಸ್ಮರಿಸಿದರು.

ನಮ್ಮ ಗಣರಾಜ್ಯದ ನೈಜ ಶಕ್ತಿಯು ವಿವಿಧತೆಯಲ್ಲಿ ಏಕತೆ, ಪ್ರಜಾಪ್ರಭುತ್ವ ಸಂಸ್ಥೆಗಳ ಚಲನಶೀಲತೆ ಮತ್ತು ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೌಲ್ಯಗಳ ಬದ್ಧತೆಯಲ್ಲಿದೆ. ಭಾರತ ಸಂವಿಧಾನದ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ನಾಯಕತ್ವದ ಕರಡು ಸಮಿತಿಯ ಪ್ರತಿಯೊಬ್ಬ ಸದಸ್ಯರೂ ಸಹ ಈ ದೇಶಕ್ಕೆ ತಮ್ಮ ಅಭೂತಪೂರ್ವ ಕೊಡುಗೆಯನ್ನು ನೀಡಿದ್ದಾರೆ. 77ನೇ ಗಣರಾಜ್ಯೋತ್ಸವದ ಈ ಸಂದರ್ಭದಲ್ಲಿ ಅವರನ್ನು ಸ್ಮರಿಸುತ್ತಾ, ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡೋಣ ಮತ್ತು ದೇಶದ ಸೇವೆ ಮತ್ತು ಪ್ರಗತಿಗಾಗಿ ನಮ್ಮನ್ನು ನಾವು ಅರ್ಪಿಸಿಕೊಳ್ಳೋಣ. ರಾಷ್ಟ್ರದ ಏಕತೆ, ಸಮಾನತೆ, ಸಮಗ್ರತೆ ಮತ್ತು ಸಮೃದ್ಧಿಯನ್ನು ಸಾಧಿಸುವಲ್ಲಿ ಪ್ರಜಾಪ್ರಭುತ್ವದ ಆದರ್ಶಗಳು ನಮಗೆ ಮಾರ್ಗದರ್ಶನ ನೀಡುತ್ತಲೇ ಇರಲಿ, ದೇಶಭಕ್ತಿ ಮತ್ತು ಏಕತೆಯ ಮನೋಭಾವವು ರಾಷ್ಟ್ರದ ಒಳಿತಿಗೆ ಕೊಡುಗೆ ನೀಡಲಿ, ಸುಭದ್ರ, ಸೌಹಾರ್ದ ಹಾಗೂ ಸಮೃದ್ಧ ಕರ್ನಾಟಕ ಹಾಗೂ ಭಾರತವನ್ನು ನಿರ್ಮಿಸಲು ಸಂವಿಧಾನದ ಶಕ್ತಿಯನ್ನು ಬಳಸಿಕೊಂಡು ಮುನ್ನಡೆಯೋಣ. ಮಾದರಿ ಗಣತಂತ್ರ ವ್ಯವಸ್ಥೆಯನ್ನು ಇನ್ನಷ್ಟು ಸದೃಢಗೊಳಿಸೋಣ ಎಂದು ಗವರ್ನರ್ ಕರೆ ನೀಡಿದರು.

ಗ್ಯಾರಂಟಿಗಳಿಗಾಗಿ 1.13 ಲಕ್ಷ ಕೋಟಿ ಅನುದಾನ ಬಳಕೆ: ಸಂವಿಧಾನದ ಮುಖ್ಯ ಆಶಯದಂತೆ ಅತ್ಯಂತ ಹಿಂದುಳಿದವರ ಬಲವರ್ಧನೆಗಾಗಿ ರಾಜ್ಯದ ಜನರಿಗೆ ಆರ್ಥಿಕ ಚೈತನ್ಯ ನೀಡುವುದಕ್ಕಾಗಿ ರಾಜ್ಯವು ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಜನ ಕಲ್ಯಾಣಕ್ಕಾಗಿ ರಾಜ್ಯವು ವರ್ಷಕ್ಕೆ 1.12 ಲಕ್ಷ ಕೋಟಿ ರೂ.ಗಳನ್ನು ಖರ್ಚು ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳಿಗಾಗಿ ಈವರೆಗೆ 1.13 ಲಕ್ಷ ಕೋಟಿ ರೂ.ಗಳಿಗೂ ಹೆಚ್ಚಿನ ಅನುದಾನವನ್ನು ವಿನಿಯೋಗಿಸಲಾಗಿದೆ. ಇದರ ಪರಿಣಾಮವಾಗಿ ಜನರ ಕೊಳ್ಳುವ ಶಕ್ತಿ ಹೆಚ್ಚಿದೆ, ಕುಟುಂಬಗಳು ಆರ್ಥಿಕವಾಗಿ ಸಬಲವಾಗುತ್ತಿವೆ ಎಂದು ಹಲವಾರು ಅಧ್ಯಯನಗಳು ಹೇಳಿವೆ. ಮಹಿಳಾ ಸಮುದಾಯದಲ್ಲಿ ಹೊಸ ಆರ್ಥಿಕ ಸಾಮಾಜಿಕ ಉತ್ಸಾಹ ಬಂದಿದೆ. ದೇಶದಲ್ಲಿ ಗ್ರಾಹಕ ಬೆಲೆ ಸೂಚ್ಯಂಕಗಳು ಆರೋಗ್ಯಕರವಾಗಿರುವ ಕೆಲವೇ ರಾಜ್ಯಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿದೆ. ಇವೆಲ್ಲದರ ಜೊತೆಗೆ ಮಹಿಳೆಯರ



ಸುರಕ್ಷತೆಯ ವಿಚಾರದಲ್ಲಿ ಬೆಂಗಳೂರು ನಗರವು ದೇಶದಲ್ಲಿಯೇ ಮೊದಲ ಸ್ಥಾನದಲ್ಲಿದೆಯೆಂದು ಸಮೀಕ್ಷೆಗಳು ಹೇಳುತ್ತಿವೆ. ಈ ಸಂಗತಿಯು ರಾಜ್ಯದ ಹೆಮ್ಮೆಯ ಸಂಗತಿಯಾಗಿದೆ ಎಂದು ರಾಜ್ಯಪಾಲರು ಶ್ಲಾಘಿಸಿದರು.

ಕುಟುಂಬ ಸರ್ವೆ ದತ್ತಾಂಶದ ಪ್ರಕಾರ, 2024-25ನೇ ಸಾಲಿನಲ್ಲಿ ರಾಜ್ಯದಲ್ಲಿ 1.37 ಕೋಟಿ ಕುಟುಂಬಗಳು ಸರ್ಕಾರದ ಒಂದಲ್ಲಾ ಒಂದು ಯೋಜನೆಯಿಂದ ನೇರ ಆರ್ಥಿಕ ಸೌಲಭ್ಯ ಪಡೆದಿವೆ. ಸರ್ಕಾರವು ಮಧ್ಯವರ್ತಿಗಳ ಹಾವಳಿ ತಪ್ಪಿಸಿ, ನೇರವಾಗಿ ಕಟ್ಟಕಡೆಯ ಫಲಾನುಭವಿಯ ಬ್ಯಾಂಕ್ ಖಾತೆಗೆ ತಲುಪುವಂತೆ ನೋಡಿಕೊಳ್ಳುತ್ತಿದೆ. ಸರ್ಕಾರವು ಯೂನಿವರ್ಸಲ್ ಬೇಸಿಕ್ ಇನ್‌ಕಂ ಎಂಬ ತತ್ವದ ಆಧಾರದ ಮೇಲೆ ತಂದಿರುವ ಗ್ಯಾರಂಟಿ ಯೋಜನೆಗಳು ಮಹಿಳೆಯರ ಬದುಕಿನಲ್ಲಿ ಮಹತ್ವದ ಬದಲಾವಣೆಗಳನ್ನು ತಂದಿವೆಯೆಂದು ಸಮೀಕ್ಷೆಗಳಿಂದ ತಿಳಿದು ಬಂದಿದೆ. ಮಕ್ಕಳ ಶಿಕ್ಷಣ, ಆರೋಗ್ಯ, ಉತ್ತಮ ಆಹಾರ, ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಬೇಕಾದ ಆರ್ಥಿಕ ಚಟುವಟಿಕೆಗಳಿಗೆ ಕರ್ನಾಟಕವು ಜಾರಿಗೆ ತಂದಿರುವ ಕಾರ್ಯಕ್ರಮಗಳು ಕಾರಣವಾಗಿವೆ ಎಂದರು.

ಕರ್ನಾಟಕವು ಇದೇ ಸಂದರ್ಭದಲ್ಲಿ ಉದ್ಯೋಗ ಸೃಜನೆ, ಮೂಲಭೂತ ಸೌಕರ್ಯಗಳನ್ನು ಒದಗಿಸುವುದರ ಕಡೆಗೂ ಹೆಚ್ಚಿನ ಆದ್ಯತೆಯನ್ನು ನೀಡುತ್ತಿದೆ. 2025-26ರ ಬಜೆಟ್‌ನಲ್ಲಿ ಬಂಡವಾಳ ವೆಚ್ಚಗಳಿಗಾಗಿ 83,200 ಕೋಟಿ ರೂ.ಗಳನ್ನು ಒದಗಿಸಿ ವೆಚ್ಚ ಮಾಡಲಾಗುತ್ತಿದೆ. ಬೆಂಗಳೂರಿನಲ್ಲಿ ಸುಮಾರು 1.5 ಲಕ್ಷ ಕೋಟಿ ರೂ.ಗಳ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಮುಂದಿನ ದಿನಮಾನಗಳಲ್ಲಿ ಇವುಗಳಿಂದಾಗಿ ಅಭಿವೃದ್ಧಿಯು ವೇಗಗೊಳ್ಳುತ್ತದೆ. ಕರ್ನಾಟಕವು ಇಂದು ಸೆಮಿಕಂಡಕ್ಟರ್, ಏರೊ ಸ್ಪೇಸ್, ಕಮ್ಯುನಿಕೇಶನ್ ಎಕ್ಯುಪಮೆಂಟ್ಸ್ ಕ್ವಾಂಟಮ್ ತಂತ್ರಜ್ಞಾನ ಮುಂತಾದ ಕ್ಷೇತ್ರದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಹೆಚ್ಚಿನ ಆದ್ಯತೆ ನೀಡುತ್ತಿರುವುದರಿಂದ ಜಗತ್ತಿನ ದೊಡ್ಡ ಕಂಪನಿಗಳು ಇಲ್ಲಿ ಹೂಡಿಕೆ ಮಾಡುತ್ತಿವೆ ಎಂದು ವಿವರಿಸಿದರು.

ಅಭಿವೃದ್ಧಿಯು ವೇಗಗೊಳ್ಳಬೇಕಾದರೆ ಜನರ ಆಸ್ತಿ ದಾಖಲೆಗಳು ಸಮರ್ಪಕವಾಗಿರಬೇಕು. ಅದಕ್ಕಾಗಿ ರಾಜ್ಯವು ನಿರಂತರವಾಗಿ ಶ್ರಮಿಸುತ್ತಿದೆ. ಕಂದಾಯ ನ್ಯಾಯಾಲಯಗಳಲ್ಲಿ ಬಹು ಕಾಲದಿಂದ ನನೆಗುದಿಗೆ ಬಿದ್ದಿದ್ದ ಶೇ.80ಕ್ಕೂ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗಿದೆ. ಈಗ ಕಂದಾಯ ನ್ಯಾಯಾಲಯಗಳನ್ನು ಆನ್‌ಲೈನ್ ಮುಖಾಂತರ ನಿರ್ವಹಿಸಲು ಅವಕಾಶ ಕಲ್ಪಿಸಿ ಪಾರದರ್ಶಕಗೊಳಿಸಲಾಗಿದೆ. 91,163 ಪೋಡಿಗಳನ್ನು ಪೂರ್ಣಗೊಳಿಸಿ ದಾಖಲೆಗಳನ್ನು ಕಾಲೋಚಿತಗೊಳಿಸಲಾಗಿದೆ. ಇವುಗಳ ಜೊತೆಯಲ್ಲಿ ದಾಖಲೆರಹಿತ 4,050 ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಣೆ ಮಾಡಿ 1,11,111 ಲಕ್ಷ ಸಂಖ್ಯೆಯ ಫಲಾನುಭವಿಗಳಿಗೆ ಹಕ್ಕು ಪತ್ರಗಳನ್ನು ಒದಗಿಸಲಾಗಿದೆ. ಇನ್ನುಳಿದ ಒಂದು ಲಕ್ಷ ಹಕ್ಕು ಪತ್ರಗಳು ವಿತರಣೆಗೆ ಸಿದ್ಧವಾಗಿವೆ. ರೈತಾಪಿ ಸಮುದಾಯಗಳ ಹಿತರಕ್ಷಣೆಯ ದೃಷ್ಟಿಯಿಂದ ಕಂದಾಯ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಡಿಜಿಟೈಸ್ ಮಾಡಲಾಗುತ್ತಿದೆ ಎಂದು ರಾಜ್ಯಪಾಲರು ಹೇಳಿದರು.

ಜನರ ಅನುಕೂಲಕ್ಕಾಗಿ ಬಿ ಖಾತಾಗಳನ್ನು ಎ ಖಾತಾಗಳನ್ನಾಗಿ ಪರಿವರ್ತಿಸಲು ಅನುಮೋದನೆ ನೀಡಲಾಗಿದೆ. ಇದರಿಂದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸುಮಾರು 20 ಲಕ್ಷಕ್ಕೂ ಹೆಚ್ಚಿನ ಜನರಿಗೆ ಅನುಕೂಲವಾಗುತ್ತಿದೆ. ಇ-ಸ್ವತ್ತು ವ್ಯವಸ್ಥೆಯನ್ನೂ ಜಾರಿಗೆ ತರಲಾಗಿದ್ದು, ಈ ವ್ಯವಸ್ಥೆಯಿಂದ ಅಸಂಖ್ಯಾತ ಜನರಿಗೆ ಅನುಕೂಲವಾಗುತ್ತಿದೆ. ಆಡಳಿತವನ್ನು ಸರಳ ಮತ್ತು ಜನಸ್ನೇಹಿಯಾಗಿಸುವ ನಿಟ್ಟಿನಲ್ಲಿ ರಾಜ್ಯವು ಕೆಲಸ ಮಾಡುತ್ತಿರುವುದರಿಂದ ಬದಲಾದ ಕಾಲಘಟ್ಟದ ಅಗತ್ಯಗಳಿಗೆ ಅನುಗುಣವಾಗಿ ಕಟ್ಟಡಗಳ ಸೆಟ್ ಬ್ಯಾಕ್‌ನ್ನು ಕಡಿಮೆ ಮಾಡಲಾಗಿದೆ ಎಂದರು.

ಸರ್ಕಾರವು ಹೊಸ ಮೆಡಿಕಲ್ ಕಾಲೇಜುಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುತ್ತಲೇ ಇದೆ. ಬೆಂಗಳೂರು, ಮೈಸೂರು, ಕಲಬುರಗಿ, ಹುಬ್ಬಳ್ಳಿ ಧಾರವಾಡ, ಬೆಳಗಾವಿ, ಮಂಗಳೂರು, ದಾವಣಗೆರೆ, ಉಡುಪಿ, ಶಿವಮೊಗ್ಗ, ತುಮಕೂರು ಮುಂತಾದ ನಗರಗಳು ಹೆಲ್ತ್ ಹಬ್‌ಗಳಾಗಿ ರೂಪುಗೊಳ್ಳುತ್ತಿವೆ. ರಾಜ್ಯದಲ್ಲಿರುವ ಮೂಲ ಸೌಕರ್ಯಗಳನ್ನು ಬಳಸಿಕೊಂಡು ಜನರ ಮನೆಗಳಿಗೆ ತೆರಳಿ ಆರೋಗ್ಯ ತಪಾಸಣೆ ಮಾಡುವ ನೂತನ ಕಾರ್ಯಕ್ರಮಗಳನ್ನು ಆರೋಗ್ಯ ಇಲಾಖೆಯು ಜಾರಿಗೊಳಿಸಿದೆ. ಅಪೌಷ್ಟಿಕತೆಯ ಸಮಸ್ಯೆಯನ್ನು ಹೋಗಲಾಡಿಸಲು ಹಲವು ಉಪಕ್ರಮಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಆಹಾರ ಕಲಬೆರಕೆಯ ವಿರುದ್ಧ ಸಮರ ಸಾರಲಾಗಿದೆ. ಕಲಬೆರಕೆಯಂಥ ಕ್ರಿಮಿನಲ್ ಕೃತ್ಯಗಳನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಉತ್ತಮ: ನಮ್ಮ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಉತ್ತಮವಾಗಿರುವ ಕಾರಣದಿಂದಾಗಿ ವಿದೇಶಿ ಹೂಡಿಕೆಗಳನ್ನು ಆಕರ್ಷಿಸುವುದರಲ್ಲಿ ಮುಂಚೂಣಿಯಲ್ಲಿದ್ದೇವೆ. ಸೌಹಾರ್ದ ವಾತಾವರಣವನ್ನು ಇನ್ನಷ್ಟು ಬಲವಾಗಿಸಲು ವಿಶೇಷ ಕಾರ್ಯಪಡೆಗಳನ್ನು ಸ್ಥಾಪಿಸಲಾಗಿದೆ. ಇದರಿಂದಾಗಿ ನಿರಂತರವಾಗಿ ಕೋಮು ಸೂಕ್ಷ್ಮತೆ ಇರುವ ಪ್ರದೇಶಗಳಲ್ಲಿ ಶಾಂತಿ ನೆಲೆಸುವಂತಾಗಿದೆ. ಸಮಾಜಕ್ಕಾಗಿ ದುಡಿಯುವ ಪೊಲೀಸರ ಮಣಭಾರದ ಸ್ಲೋಚ್ ಹ್ಯಾಟುಗಳ ಭಾರವನ್ನು ಇಳಿಸಿ ಹೊಸ ಪೀಕ್ ಕ್ಯಾಪುಗಳನ್ನು ನೀಡಲಾಗಿದೆ. ಇದರಿಂದ ಅವರ ಕಾರ್ಯ ಕ್ಷಮತೆ ಹೆಚ್ಚುವುದು ಸಾಧ್ಯವಾಗಿದೆ ಎಂದರು.

ಹೊಸ ಕಾಲಘಟ್ಟದಲ್ಲಿ ಡ್ರಗ್ಸ್ ಎಂಬ ಮನುಷ್ಯ ವಿರೋಧಿ ದುರಂತಕಾರಿ ಪಿಡುಗು ನಮ್ಮ ಯುವ ಜನರನ್ನು ಬಲಿ ಪಡೆಯುತ್ತಿದೆ. ಇದನ್ನು ತಪ್ಪಿಸಲು ರಾಜ್ಯವು ಈ ಪಿಡುಗಿಗೆ ಕಾರಣರಾದವರನ್ನು ನರಹತ್ಯೆಗೆ ಸಮನಾದ ಅಪರಾಧ ಮಾಡಿದವರು ಎಂದು ತೀರ್ಮಾನಿಸಿ ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಗಳನ್ನು ಕೈಗೊಳ್ಳಲು ಅಗತ್ಯವಿರುವ ಕಾನೂನುಗಳನ್ನು ರೂಪಿಸುತ್ತಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಮೇಲಿನ ದೌರ್ಜನ್ಯಗಳನ್ನು ತಡೆಯಲು 33 ಹೊಸ ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲಾಗಿದೆ. ಕಾನೂನು ಸುವ್ಯವಸ್ಥೆಯನ್ನು ಬಿಗಿ ಮಾಡುವ ನಿಟ್ಟಿನಲ್ಲಿ 12 ಹೊಸ ಠಾಣೆಗಳು ಪ್ರಾರಂಭವಾಗಿವೆ. ಎಲ್ಲಾ ಸಿಇಎನ್ ಪೊಲೀಸ್ ಠಾಣೆಗಳನ್ನು ಸೈಬರ್ ಪೊಲೀಸ್ ಠಾಣೆಗಳಾಗಿ ಬದಲಾಯಿಸಲಾಗಿದೆ. ಈ ಎಲ್ಲ ಉಪಕ್ರಮಗಳ ಉದ್ದೇಶ ನಮ್ಮ ರಾಜ್ಯವನ್ನು ಇನ್ನಷ್ಟು ಉತ್ತಮವಾದ ಕಾನೂನು ಸುವ್ಯವಸ್ಥೆ ಹೊಂದಿದ ರಾಜ್ಯವನ್ನಾಗಿಸುವುದೇ ಆಗಿದೆ ಎಂದು ವಿವರಿಸಿದರು.

ಸರ್ಕಾರದಿಂದ ಬೆಳೆಗಳ ಖರೀದಿ ಕೇಂದ್ರ: 2025ರಲ್ಲಿ ಉತ್ತಮ ಮಳೆಯಾದ ಕಾರಣ ಈ ವರ್ಷ ಅತ್ಯುತ್ತಮ ಕೃಷಿ ಬೆಳೆಗಳನ್ನು ಬೆಳೆಯಲಾಗಿದೆ. ಅತಿವೃಷ್ಟಿಯೂ ಸಹ ರೈತರ ಬೆಳೆಗಳಿಗೆ ಹಾನಿ ಮಾಡಿತು. ಮಳೆಯಿಂದ ಹಾನಿಯಾದ ಬೆಳೆಗಳಿಗಾಗಿ ರೈತರಿಗೆ ಪರಿಹಾರ ನೀಡಲು ಸರ್ಕಾರವು 2,250 ಕೋಟಿ ರೂ.ಗಳನ್ನು ವಿನಿಯೋಗಿಸಿದೆ. ಇದರ ಜೊತೆಗೆ 2,000 ಕೋಟಿ ರೂ.ಗಳಿಗೂ ಹೆಚ್ಚಿನ ಮೊತ್ತದ ವಿಮೆಯನ್ನು ರೈತರಿಗೆ ಸಿಗುವಂತೆ ಮಾಡಲಾಗಿದೆ. ಈ ವರ್ಷ ರೈತರು ಬೆಳೆದ ಮಾವು, ಮೆಕ್ಕೆಜೋಳ ಮುಂತಾದವುಗಳಿಗೆ ಬೆಲೆ ಕಡಿಮೆಯಾಯಿತೆಂದು ಹಾಗೂ ಕಬ್ಬಿಗೆ ಸಿಗುತ್ತಿರುವ ದರ ಸಾಲದ್ದೆಂದು ಪ್ರತಿಭಟನೆ ಮಾಡಿದರು. ಸರ್ಕಾರವು ಕೂಡಲೆ ರೈತರ ಪರವಾಗಿ ನಿಂತು ಸಮಸ್ಯೆಗಳನ್ನು ಪರಿಹರಿಸಿತು. ಕಬ್ಬು ಬೆಳೆದ ರೈತರಿಗೆ ಇಂತಿಷ್ಟೇ ಬೆಲೆ ನೀಡಬೇಕೆಂದು ಸಕ್ಕರೆ ಕಾರ್ಖಾನೆಗಳ ಮಾಲೀಕರಿಗೆ ಸೂಚನೆಗಳನ್ನು ನೀಡಿ ಸರ್ಕಾರವು ಸಹ ಸುಮಾರು 300 ಕೋಟಿ ರೂ.ಗಳಿಗೂ ಹೆಚ್ಚಿನ ನೆರವನ್ನು ರೈತರಿಗೆ ನೀಡಲು ನಿರ್ಧರಿಸಿತು. ಇದೇ ಸಂದರ್ಭದಲ್ಲಿ ತೊಗರಿ ಖರೀದಿ ಕೇಂದ್ರಗಳನ್ನು ಜನವರಿಯ ಬದಲಾಗಿ ಡಿಸೆಂಬರಿನಲ್ಲಿಯೇ ತೆರೆಯಬೇಕೆಂದು ಒತ್ತಡ ಬಂದ ಕಾರಣ ಸರ್ಕಾರ ರೈತರ ಬೇಡಿಕೆಗಳಿಗೆ ಸ್ಪಂದಿಸಿ ಖರೀದಿ ಕೇಂದ್ರಗಳನ್ನು ತೆರೆದಿದೆ ಎಂದರು.

ಪ್ರಸ್ತುತ ಸರ್ಕಾರವು ರೈತರ ಪಂಪ್‌ಸೆಟ್‌ಗಳಿಗೆ ಹಗಲು ಹೊತ್ತಿನಲ್ಲೂ 7 ಗಂಟೆಗಳ ಕಾಲ ನಿರಂತರವಾಗಿ ತ್ರೀಫೇಸ್ ವಿದ್ಯುತ್ ಪೂರೈಸಲು ಪ್ರಯತ್ನಿಸುತ್ತಿದೆ. ಬದಲಾದ ಪರಿಸ್ಥಿತಿಯಲ್ಲಿ ರೈತರು ಬೆಳೆದ ಕಬ್ಬು ಕಟಾವು ಯಂತ್ರಗಳಿಗೆ ದೊಡ್ಡ ಪ್ರಮಾಣದ ಪ್ರೋತ್ಸಾಹ ಧನವನ್ನು ನೀಡಿ ಯಂತ್ರಗಳನ್ನು ಒದಗಿಸಲಾಗುತ್ತಿದೆ. ಈಗ ರಾಗಿ, ಭತ್ತ, ಮೆಕ್ಕೆಜೋಳ ಮುಂತಾದ ಬೆಳೆಗಳನ್ನು ಕಟಾವು ಮಾಡಲು ರೈತರು ಯಂತ್ರಗಳನ್ನೇ ಅವಲಂಬಿಸಿದ್ದಾರೆ. ಕೃಷಿ ಯಂತ್ರೋಪಕರಣ ಯೋಜನೆಯ ಮೂಲಕ ಸರ್ಕಾರ ಅವುಗಳಿಗೂ ನೆರವು ನೀಡುತ್ತಿದೆ. ನಮ್ಮ ಸರ್ಕಾರವು 2025-26 ಸೇರಿಸಿದಂತೆ ಸುಮಾರು 10,000 ಕೋಟಿ ರೂ.ಗಳಿಗೂ ಹೆಚ್ಚಿನ ಮೊತ್ತವನ್ನು ಸಬ್ಸಿಡಿ ಹಾಗೂ ಇನ್ನಿತರೆ ರೂಪದಲ್ಲಿ ರೈತರಿಗೆ ನೀಡಲಾಗಿದೆ ಎಂದು ತಿಳಿಸಿದರು.

ನಮ್ಮ ಸರ್ಕಾರವು ತಾನೆಷ್ಟು ರೈತ ಪರ ಎಂಬುದನ್ನು ಸಾಬೀತುಪಡಿಸುತ್ತಲೇ ಇದೆ. ಬಹಳ ಕಾಲದಿಂದ ಹೋರಾಟ ನಡೆಸುತ್ತಿದ್ದ ದೇವನಹಳ್ಳಿಯ ರೈತರ ಜಮೀನುಗಳನ್ನು ಭೂ ಸ್ವಾಧೀನದಿಂದ ಕೈ ಬಿಟ್ಟಿದೆ. ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಒಂದೇ ಹಂತದಲ್ಲಿ ಭೂ ಸ್ವಾಧೀನ ಮಾಡಿಕೊಳ್ಳಲು ತೀರ್ಮಾನಿಸಿ ಭೂಮಿ ಕಳೆದುಕೊಳ್ಳುವ ರೈತರಿಗೆ ಉತ್ತಮ ಪರಿಹಾರದ ದರಗಳನ್ನು ನಿಗದಿಪಡಿಸಿದೆ. ರೈತ ಸಮುದಾಯದ ಭಾವನೆಗಳನ್ನು ಅರ್ಥ ಮಾಡಿಕೊಂಡು ಸರ್ಕಾರ ಕೆಲಸ ಮಾಡುತ್ತಿದೆ ಎಂದರು.

ಬೆಂಗಳೂರು ಮಹಾನಗರದ ಅಭಿವೃದ್ಧಿಗಾಗಿ ಸುಮಾರು 1.5 ಲಕ್ಷ ಕೋಟಿ ರೂ.ಗಳ ಬೃಹತ್ ಯೋಜನೆಗಳನ್ನು ರೂಪಿಸಲಾಗುತ್ತಿದೆ. ಮೆಟ್ರೋ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ವಿಸ್ತರಿಸಲಾಗುತ್ತಿದೆ. 110 ಗ್ರಾಮಗಳಿಗೆ ಕಾವೇರಿ 5ನೇ ಹಂತದ ಯೋಜನೆಯಡಿ ನೀರು ಸರಬರಾಜು ಮಾಡಲು ಪ್ರಾರಂಭಿಸಲಾಗಿದೆ. ಬೆಂಗಳೂರು ಬ್ಯುಸಿನೆಸ್ ಕಾರಿಡಾರ್‌ನ ಪ್ರಗತಿಯು ಪ್ರಾರಂಭವಾಗಿದ್ದು, ನಗರದ ಸಾರಿಗೆ ವ್ಯವಸ್ಥೆಯನ್ನು ಸುಧಾರಿಸಲು ಸರ್ಕಾರವು ಶ್ರಮಿಸುತ್ತಿದೆ. ರಾಜ್ಯದ 227 ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 9,574 ಕೋಟಿ ರೂ.ಗಳ ವೆಚ್ಚದಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. 3,885 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ-4ನೇ ಹಂತದ ಯೋಜನೆ ಚಾಲ್ತಿಯಲ್ಲಿದೆ. ವರ್ಗಾವಣೆಗಳಲ್ಲಿನ ಭ್ರಷ್ಟಾಚಾರವನ್ನು ನಿಗ್ರಹಿಸಲು ಸರ್ಕಾರವು ನಿರಂತರವಾಗಿ ಕೆಲಸ ಮಾಡುತ್ತಿದೆ. ಅನೇಕ ಇಲಾಖೆಗಳ ಪ್ರಮುಖ ಹುದ್ದೆಗಳನ್ನು ಕೌನ್ಸೆಲಿಂಗ್ ಮೂಲಕವೇ ನಡೆಸಲಾಗುತ್ತಿದೆ ಎಂಬುದು ಸಂತೋಷದ ವಿಷಯ ಎಂದು ಹೇಳಿದರು

ಸರ್ಕಾರವು ರಾಜ್ಯದ ಎಲ್ಲಾ ದೇವಸ್ಥಾನಗಳ ಆಸ್ತಿಗಳನ್ನು ಅಳತೆ ಮಾಡಿ ಒತ್ತುವರಿಗಳನ್ನು ತೆರವು ಮಾಡಿ ದೇವಸ್ಥಾನಗಳಿಗೆ ಮರಳಿಸುವ ಕೆಲಸ ಮಾಡುತ್ತಿದೆ. ಇದಕ್ಕಾಗಿ 15 ಕೋಟಿ ರೂ.ಗಳ ಹಂಚಿಕೆಯೊಂದಿಗೆ ಭೂ ವರಾಹ ಯೋಜನೆಯನ್ನು ರೂಪಿಸಲಾಗಿದೆ. ತಿರುಪತಿಯಲ್ಲಿ ರಾಜ್ಯದ ಯಾತ್ರಾರ್ಥಿಗಳ ಅನುಕೂಲಕ್ಕಾಗಿ 200 ಕೋಟಿ ರೂ. ವೆಚ್ಚದಲ್ಲಿ ಕರ್ನಾಟಕ ಛತ್ರಗಳನ್ನು ನಿರ್ಮಿಸಲಾಗಿದೆ. ಅಂಜನಾದ್ರಿ ಬೆಟ್ಟವನ್ನು ಸಮಗ್ರವಾಗಿ ಅಭಿವೃದ್ಧಿ ಮಾಡುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ದೇವಾಲಯಗಳ ಅರ್ಚಕರ ಆರ್ಥಿಕ ಭದ್ರತೆಗಾಗಿ ತಸ್ತೀಕ್ ಮತ್ತು ವರ್ಷಾಶನ ಮೊತ್ತವನ್ನು ವಾರ್ಷಿಕವಾಗಿ 60,000 ರೂ. ಗಳಿಂದ 72,000 ರೂ.ಗಳಿಗೆ ಏರಿಕೆ ಮಾಡಲಾಗಿದೆ. ಅಲ್ಪಸಂಖ್ಯಾತರ ಕಲ್ಯಾಣಕ್ಕೂ ಸಹ ಸರ್ಕಾರ ಶ್ರಮಿಸುತ್ತಿದೆ ಎಂದು ವಿವರಿಸಿದರು.

ಈ ಆರ್ಥಿಕ ವರ್ಷದ 10 ತಿಂಗಳುಗಳಲ್ಲಿ 28,000 ಮಿಲಿಯನ್ ಯೂನಿಟ್ ವಿದ್ಯುತ್ತನ್ನು ಉತ್ಪಾದಿಸಲಾಗಿದೆ. ಈ ವರ್ಷ 41,208 ವಿತರಣಾ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR